♦ಸಂಪುಟ: 01 ♦ಸಂಚಿಕೆ : 156♦ ಪುಟಗಳು : 04♦ ಬೆಲೆ : 2ರೂ♦ 26.11.2026♦ ಗುರುವಾರ ♦email:ganinaadavaani@gmail.com♦ಬಳ್ಳಾರಿ ♦KNKAN/26/A0397

ಗಣಿನಾಡ ವಾಣಿ

ಎ.ಕೆ.ಮಲ್ಲಿಕಾರ್ಜುನ ಸಂಪಾದಕತ್ವದಲ್ಲಿ GANINAADA VAANI

ಜನರ ಮನದಾಳದ ಧ್ವನಿ

ಗಣಿನಾಡ ವಾಣಿ
ಸುದ್ದಿ ಹಾಗೂ ಆಕರ್ಷಕ ವಿನ್ಯಾಸದ ಜಾಹಿರಾತುಗಳಿಗಾಗಿ ಸಂಪರ್ಕಿಸಿ
9743034347
9900966891

ಜಪಾನ್ ಕಂಪನಿಯಿಂದ ರಾಜ್ಯದಲ್ಲಿ 800 ಕೋಟಿ ರೂ. ಹೂಡಿಕೆ ಒಪ್ಪಂದ

ಗಣಿನಾಡ ವಾಣಿ

ಬೆಂಗಳೂರು, ಕರ್ನಾಟಕದ ಉತ್ಪಾದನಾ ಮತ್ತು ಎಂಜಿನಿಯರಿಂಗ್ ವಲಯಕ್ಕೆ ಮತ್ತಷ್ಟು ಉತ್ತೇಜನ ನೀಡುವ ಉದ್ದೇಶದಿಂದ ಜಪಾನ್‌ನ ಪ್ರತಿಷ್ಠಿತ ಕವಾಸಕಿ ಹೆವಿ ಇಂಡಸ್ಟ್ರಿಸ್ ಕಂಪನಿಯು ರಾಜ್ಯದಲ್ಲಿ 10 ವರ್ಷಗಳಲ್ಲಿ ಗರಿಷ್ಠ 800 ಕೋಟಿ ರೂ. ಹೂಡಿಕೆ ಮಾಡಲು ಮುಂದಾಗಿದೆ ಎಂದು ಸಿಎಂ ಕಚೇರಿ ಪ್ರಕಟಣೆ ತಿಳಿಸಿದೆ. ಕರ್ನಾಟಕದ ನಿಯೋಗದೊಂದಿಗೆ ಜಪಾನ್ ಪ್ರವಾಸ ಕೈಗೊಂಡಿರುವ ಮುಖ್ಯಮಂತ್ರಿಯವರು, ಅಲ್ಲಿ ಪ್ರಮುಖ ಉದ್ದಿಮೆದಾರರನ್ನು ಭೇಟಿ ಮಾಡಿ, ರಾಜ್ಯದಲ್ಲಿ ಬಂಡವಾಳ ಹೂಡಿಕೆಗೆ ಆಹ್ವಾನ ನೀಡುತ್ತಿದ್ದಾರೆ.ನಕ್ಷೆಗಳನ್ನು ನೋಡಿ

ಬೆಂಗಳೂರು ದಕ್ಷಿಣ ಜಿಲ್ಲೆಯ ಹಾರೋಹಳ್ಳಿ ಕೈಗಾರಿಕಾ ಪ್ರದೇಶದ 5ನೇ ಹಂತದಲ್ಲಿ ವಿಪ್ರೊ ಕವಾಸಕಿ ಪ್ರಿಸಿಷನ್ ಮೆಷಿನರಿ ಪ್ರೈವೇಟ್ ಲಿಮಿಟೆಡ್ ಘಟಕವನ್ನು ವಿಸ್ತರಿಸಲು ಕಂಪನಿ ನಿರ್ಧರಿಸಿದೆ. ಈ ಯೋಜನೆಯಿಂದ ಸುಮಾರು 600 ಉದ್ಯೋಗಾವಕಾಶಗಳು ಸೃಷ್ಟಿಯಾಗುವ ನಿರೀಕ್ಷೆಯಿದೆ. ಜಪಾನ್‌ನ ಟೋಕಿಯೋದಲ್ಲಿ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಹಾಗೂ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಕರ್ಯ ಅಭಿವೃದ್ಧಿ ಸಚಿವ ಎಂ.ಬಿ. ಪಾಟೀಲ್ ಅವರ ಉಪಸ್ಥಿತಿಯಲ್ಲಿ ಈ ಸಂಬಂಧ ತಿಳಿವಳಿಕೆ ಒಪ್ಪಂದಕ್ಕೆ ಸಹಿ ಹಾಕಲಾಯಿತು.ನಕ್ಷೆಗಳನ್ನು ನೋಡಿ



ವಾಣಿಜ್ಯ ಮತ್ತು ಕೈಗಾರಿಕಾ ಇಲಾಖೆಯ ಪ್ರಧಾನ ಕಾರ್ಯದರ್ಶಿ ಡಾ. ಎಸ್. ಸೆಲ್ವಕುಮಾರ್, ಕವಾಸಕಿ ಹೆವಿ ಇಂಡಸ್ಟ್ರಿಸ್‌ನ ಕೆಂಜಿ ಮತ್ಸುಶಿತಾ ಹಾಗೂ ವಿಪ್ರೊ ಕವಾಸಕಿ ಪ್ರಿಸಿಷನ್ ಮೆಷಿನರಿಯ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಮಿನೋರು ಹತ್ಸುಡಾ ಅವರು ಒಪ್ಪಂದವನ್ನು ವಿನಿಮಯ ಮಾಡಿಕೊಂಡರು. ಪ್ರಸ್ತಾವಿತ ಘಟಕದಲ್ಲಿ ನಿರ್ಮಾಣ ಯಂತ್ರೋಪಕರಣ ಉದ್ಯಮಕ್ಕೆ ಅಗತ್ಯವಿರುವ ಹೈಡ್ರಾಲಿಕ್ ಪಂಪ್‌ಗಳು, ಸ್ವಿಂಗ್ ಮೋಟಾರ್‌ಗಳು ಹಾಗೂ ಇತರ ಬಿಡಿಭಾಗಗಳನ್ನು ತಯಾರಿಸಲಾಗುತ್ತದೆ.

ಯೋಜನೆಯನ್ನು ಎರಡು ಹಂತಗಳಲ್ಲಿ ಅನುಷ್ಠಾನಗೊಳಿಸಲು ಉದ್ದೇಶಿಸಲಾಗಿದೆ. ಮೊದಲ ಹಂತದಲ್ಲಿ 200ರಿಂದ 400 ಕೋಟಿ ರೂ. ಹಾಗೂ ಎರಡನೇ ಹಂತದಲ್ಲಿ 400ರಿಂದ 800 ಕೋಟಿ ರೂ. ಹೂಡಿಕೆ ಮಾಡಲಾಗುತ್ತದೆ.

ಈ ವಿಸ್ತರಣೆಯಿಂದ ಉನ್ನತ ಕೌಶಲ್ಯದ ಸುಮಾರು 600 ಉತ್ಪಾದನಾ ಉದ್ಯೋಗಗಳು ಸೃಷ್ಟಿಯಾಗಲಿವೆ.2012ರಲ್ಲಿ

ಬೆಂಗಳೂರಿನಲ್ಲಿ ಸ್ಥಾಪನೆಯಾದ ವಿಪ್ರೊ ಕವಾಸಕಿ ಪ್ರಿಸಿಷನ್ ಮೆಷಿನರಿ ಸಂಸ್ಥೆಯು ಭಾರತದ ಅಗೆಯುವ ಯಂತ್ರಗಳ ಹೈಡ್ರಾಲಿಕ್ ಪಂಪ್ ಮಾರುಕಟ್ಟೆಯಲ್ಲಿ ಪ್ರಮುಖ ಸಂಸ್ಥೆಯಾಗಿ ಗುರುತಿಸಿಕೊಂಡಿದೆ.

ಈಗಿನ ವಿಸ್ತರಣೆಯು ವಿಪ್ರೊ ಮತ್ತು ಕವಾಸಕಿ ನಡುವಿನ ಯಶಸ್ವಿ ಸಹಭಾಗಿತ್ವವನ್ನು ಮತ್ತಷ್ಟು ಬಲಪಡಿಸುವುದರ ಜತೆಗೆ ರಾಜ್ಯದ ನಿರ್ಮಾಣ ಯಂತ್ರೋಪಕರಣ ಹಾಗೂ ಬಂಡವಾಳ ಸರಕುಗಳ ಉತ್ಪಾದನಾ ವ್ಯವಸ್ಥೆಗೆ ಉತ್ತೇಜನ ನೀಡಲಿದೆ. 2016ರಿಂದ ಕರ್ನಾಟಕದಲ್ಲಿ ಜಪಾನ್‌ನ 101 ಹೊಸ ಕೈಗಾರಿಕಾ ಯೋಜನೆಗಳು ಆರಂಭವಾಗಿದ್ದು, ಪ್ರಸ್ತುತ 525ಕ್ಕೂ ಹೆಚ್ಚು ಜಪಾನ್ ಮೂಲದ ಸಂಸ್ಥೆಗಳು ರಾಜ್ಯದಲ್ಲಿ ಕಾರ್ಯನಿರ್ವಹಿಸುತ್ತಿವೆ. ಜಪಾನ್ ಹೂಡಿಕೆದಾರರಿಗೆ ಕರ್ನಾಟಕ ಪ್ರಮುಖ ಆದ್ಯತೆಯ ತಾಣವಾಗಿ ಮುಂದುವರಿದಿದೆ. ಯೋಜನೆಗೆ ಅಗತ್ಯವಿರುವ ಭೂಮಿ ಹಂಚಿಕೆ, ಅನುಮತಿಗಳು, ಪರವಾನಗಿಗಳು ಹಾಗೂ ಅನ್ವಯವಾಗುವ ಪ್ರೋತ್ಸಾಹಧನವನ್ನು ಕಾಲಮಿತಿಯೊಳಗೆ ಒದಗಿಸಲು ರಾಜ್ಯ ಸರ್ಕಾರ ಸಹಕಾರ ನೀಡಲಿದೆ.ನಕ್ಷೆಗಳನ್ನು ನೋಡಿ

ಇದೇ ಸಂದರ್ಭದಲ್ಲಿ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಹಾಗೂ ಕೈಗಾರಿಕಾ ಸಚಿವ ಎಂ.ಬಿ. ಪಾಟೀಲ್ ಅವರು 2027ರ ಏಪ್ರಿಲ್ 20ರಿಂದ 22ರವರೆಗೆ ಬೆಂಗಳೂರಿನಲ್ಲಿ ನಡೆಯಲಿರುವ ಜಾಗತಿಕ ಹೂಡಿಕೆದಾರರ ಸಮಾವೇಶದಲ್ಲಿ ಭಾಗವಹಿಸುವಂತೆ ಕವಾಸಕಿ ಕಂಪನಿಯ ಆಡಳಿತ ಮಂಡಳಿಗೆ ಆಹ್ವಾನ ನೀಡಿದ್ದಾರೆ.

ಬಳ್ಳಾರಿ ನಗರ ಕೇಂದ್ರ ಗ್ರಂಥಾಲಯದಲ್ಲಿ ರಾಷ್ಟ್ರೀಯ ಗ್ರಂಥಾಲಯ ಸಪ್ತಾಹ–2026 ಪ್ರಶಸ್ತಿ ಪ್ರಧಾನ ಸಮಾರಂಭ

ಗ್ರಂಥಾಲಯದ ಪುಸ್ತಕಗಳು, ಸೌಲಭ್ಯಗಳನ್ನು ಸದ್ಬಳಕೆ ಮಾಡಿಕೊಳ್ಳುವಂತೆ ಮೇಯರ್ ಪಿ.ಗಾದೆಪ್ಪ ಕರೆ



ಗಣಿನಾಡ ವಾಣಿ

ಬಳ್ಳಾರಿ,ನ.25(ಕರ್ನಾಟಕ ವಾರ್ತೆ): ಮಕ್ಕಳು, ವಿದ್ಯಾರ್ಥಿಗಳು, ಸ್ಪರ್ಧಾತ್ಮಕ ಪರೀಕ್ಷಾರ್ಥಿಗಳು ಹಾಗೂ ಸಾರ್ವಜನಿಕರು ಗ್ರಂಥಾಲಯದ ಪುಸ್ತಕಗಳು ಮತ್ತು ಸೌಲಭ್ಯಗಳನ್ನು ಸದ್ಬಳಕೆ ಮಾಡಿಕೊಳ್ಳಬೇಕು ಎಂದು ಬಳ್ಳಾರಿ ಮಹಾನಗರ ಪಾಲಿಕೆ ಮಹಾಪೌರರು ಹಾಗೂ ನಗರ ಗ್ರಂಥಾಲಯ ಪ್ರಾಧಿಕಾರದ ಅಧ್ಯಕ್ಷರಾದ ಪಿ. ಗಾದೆಪ್ಪ ಅವರು ಹೇಳಿದರು.

ಇಲ್ಲಿನ ನಗರ ಕೇಂದ್ರ ಗ್ರಂಥಾಲಯದಲ್ಲಿ ಬುಧವಾರ ಹಮ್ಮಿಕೊಂಡಿದ್ದ ರಾಷ್ಟ್ರೀಯ ಗ್ರಂಥಾಲಯ ಸಪ್ತಾಹ–2026ರ ಪ್ರಶಸ್ತಿ ಪ್ರಧಾನ ಸಮಾರಂಭವನ್ನು ಡಾ. ಎಸ್.ಆರ್. ರಂಗನಾಥನ್ ಮತ್ತು ಸರಸ್ವತಿ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮೂಲಕ ಉದ್ಘಾಟಿಸಿ ಅವರು ಮಾತನಾಡಿದರು.

ಡಾ. ಬಿ.ಆರ್. ಅಂಬೇಡ್ಕರ್ ಅವರು ಓದುವ ಹವ್ಯಾಸದಿಂದಲೇ ದೇಶಕ್ಕೆ ಸಂವಿಧಾನ ನೀಡಿದ್ದಾರೆ; ಸ್ವಾಮಿ ವಿವೇಕಾನಂದರು ಸೇರಿದಂತೆ ಹಲವು ಮಹನೀಯರು ಗ್ರಂಥಾಲಯಗಳ ಬಳಕೆಯಿಂದ ದೇಶಕ್ಕೆ ಕೊಡುಗೆ ನೀಡಿದ್ದಾರೆ ಎಂದರು.

ಕಳೆದ ವಾರ ವಿವಿಧ ಶಾಖಾ ಗ್ರಂಥಾಲಯಗಳನ್ನು ವೀಕ್ಷಿಸಿ ವಾರ್ಡ್ ಸದಸ್ಯರೊಂದಿಗೆ ಚರ್ಚಿಸಿದ್ದು, ಮಹಾನಗರ ಪಾಲಿಕೆ ಹಾಗೂ ಗ್ರಂಥಾಲಯ ಪ್ರಾಧಿಕಾರದಿಂದ ಹೆಚ್ಚಿನ ಸೌಲಭ್ಯ ಕಲ್ಪಿಸಲಾಗುವುದು ಎಂದು ತಿಳಿಸಿದರು.

ಪ್ರಬಂಧ ಸ್ಪರ್ಧೆಯಲ್ಲಿ ವಿಜೇತರಾದ ಗ್ರಾಮೀಣ ವಿದ್ಯಾರ್ಥಿಗಳಿಗೆ ಅವರು ಶುಭ ಹಾರೈಸಿದರು.

ನಗರ ಕೇಂದ್ರ ಗ್ರಂಥಾಲಯದ ಮುಖ್ಯ ಗ್ರಂಥಾ– >>2

ಮಾನಸಿಕ ಒತ್ತಡ ನಿವಾರಣೆಗೆ ಕ್ರೀಡೆ ಅವಶ್ಯಕ: ಜಿಲ್ಲಾಧಿಕಾರಿ ನಾಗೇಂದ್ರ ಪ್ರಸಾದ್ ಕರೆ

ಗಣಿನಾಡ ವಾಣಿ

ಬಳ್ಳಾರಿ,ನ.25(ಕರ್ನಾಟಕ ವಾರ್ತೆ): ಇಂದಿನ ಒತ್ತಡದ ಜೀವನ ಶೈಲಿಯಲ್ಲಿ ದೈಹಿಕ ಮತ್ತು ಮಾನಸಿಕ ಆರೋಗ್ಯವನ್ನು ಕಾಪಾಡಿಕೊಳ್ಳಲು ಪ್ರತಿಯೊಬ್ಬರೂ ಯಾವುದಾದರೂ ಒಂದು ಕ್ರೀಡೆಯಲ್ಲಿ ತೊಡಗಿಸಿಕೊಳ್ಳಬೇಕು. ಕ್ರೀಡೆಯಲ್ಲಿ ಭಾಗವಹಿಸುವುದರ ಜೊತೆಗೆ ಕ್ರೀಡಾಸ್ಫೂರ್ತಿ ಮತ್ತು ಶಿಸ್ತನ್ನು ಮೈಗೂಡಿಸಿಕೊಳ್ಳಬೇಕು ಎಂದು ಜಿಲ್ಲಾಧಿಕಾರಿ ನಾಗೇಂದ್ರ ಪ್ರಸಾದ್.ಕೆ ಅವರು ಹೇಳಿದರು.

ಬುಧವಾರ ನಗರದ ಜಿಲ್ಲಾ ಪೊಲೀಸ್ ಕವಾಯತು (ಡಿಎಆರ್) ಮೈದಾನದಲ್ಲಿ ಜಿಲ್ಲಾ ಪೊಲೀಸ್ ಇಲಾಖೆ ವತಿಯಿಂದ ಆಯೋಜಿಸಲಾಗಿದ್ದ, ಬಳ್ಳಾರಿ ಜಿಲ್ಲಾ ಪೊಲೀಸ್ ವಾರ್ಷಿಕ ಕ್ರೀಡಾಕೂಟ–2026 ಎಂಬ ಕಾರ್ಯಕ್ರಮಕ್ಕೆ ಬಲೂನ್‌ಗಳನ್ನು ಹಾರಿಬಿಡುವ ಮೂಲಕ ಚಾಲನೆ ನೀಡಿ ಅವರು ಮಾತನಾಡಿದರು.

ಪೊಲೀಸ್ ಇಲಾಖೆಯ ಸಿಬ್ಬಂದಿ ದಿನನಿತ್ಯದ ಕರ್ತವ್ಯದ ಒತ್ತಡದ ನಡುವೆಯೂ ತಮ್ಮ ದೈಹಿಕ ಮತ್ತು ಮಾನಸಿಕ ಆರೋಗ್ಯದ ಬಗ್ಗೆ ವಿಶೇಷ ಕಾಳಜಿ ವಹಿಸಬೇಕು. ಸಿಬ್ಬಂದಿ ಉತ್ತಮ ಆರೋಗ್ಯ ಮತ್ತು ದೈಹಿಕ ಸಾಮರ್ಥ್ಯ ಹೊಂದಿದ್ದರೆ ಮಾತ್ರ ಕರ್ತವ್ಯಗಳನ್ನು ಸಮರ್ಥವಾಗಿ ನಿರ್ವಹಿಸಲು ಸಾಧ್ಯ. ಈ ನಿಟ್ಟಿನಲ್ಲಿ ವಾರ್ಷಿಕ ಕ್ರೀಡಾಕೂಟಗಳು ಮಹತ್ವದ ಪಾತ್ರ ವಹಿಸುತ್ತವೆ ಎಂದರು.

ಕ್ರೀಡೆಗಳು ಕೇವಲ ಗೆಲುವು ಮತ್ತು ಸೋಲಿಗೆ ಸೀಮಿತವಾಗಿಲ್ಲ. ಅವು ಶಿಸ್ತು, ಸಮಯಪ್ರಜ್ಞೆ, ಆತ್ಮವಿಶ್ವಾಸ, ಪರಸ್ಪರ ಸಹಕಾರ ಹಾಗೂ ತಂಡದ ಮನೋಭಾವವನ್ನು ಬೆಳೆಸುತ್ತವೆ.



ಆದ್ದರಿಂದ ಪ್ರತಿಯೊಬ್ಬರೂ ಕ್ರೀಡಾಕೂಟಗಳಲ್ಲಿ ಉತ್ಸಾಹದಿಂದ ಪಾಲ್ಗೊಂಡು ಸೋಲು–ಗೆಲುವನ್ನು ಸಮಾನವಾಗಿ ಸ್ವೀಕರಿಸಬೇಕು ಎಂದು ಸಲಹೆ ನೀಡಿದರು.

ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮಹಮ್ಮದ್ ಹಾರೀಸ್ ಸುಮೇರ್ ಮಾತನಾಡಿ, ಪೊಲೀಸ್ ಇಲಾಖೆಯ ಸಿಬ್ಬಂದಿ ಸಾರ್ವಜನಿಕರ ಹಿತಾಸಕ್ತಿ, ಸುರಕ್ಷತೆ ಹಾಗೂ ಕಾನೂನು ಸುವ್ಯವಸ್ಥೆ ಕಾಪಾಡಲು ನಿರಂತರವಾಗಿ ಕಾರ್ಯನಿರ್ವಹಿಸುವುದ

ರಿಂದ ಸಹಜವಾಗಿಯೇ ಮಾನಸಿಕ ಒತ್ತಡ ಎದುರಿಸಬೇಕಾಗುತ್ತದೆ. ಇಂತಹ ಸಂದರ್ಭದಲ್ಲಿ ಕ್ರೀಡೆಗಳಲ್ಲಿ ತೊಡಗಿಸಿಕೊಳ್ಳುವುದು ಒತ್ತಡ ನಿವಾರಣೆಗೆ ಸಹಕಾರಿಯಾಗಿದೆ. ಸುಖಕರ ಜೀವನಕ್ಕೆ ಆರೋಗ್ಯವೇ ಪ್ರಮುಖವಾಗಿದ್ದು, ಅದನ್ನು ಕಾಪಾಡಿಕೊಳ್ಳುವುದು ಪ್ರತಿಯೊಬ್ಬರ ಕರ್ತವ್ಯವಾಗಿದೆ. ಪೊಲೀಸ್ ಸಿಬ್ಬಂದಿ ಕ್ರೀಡಾಕೂಟದಲ್ಲಿ ಉತ್ಸಾಹದಿಂದ ಭಾಗವಹಿಸಿ ಯಶಸ್ವಿಗೊಳಿಸಬೇಕು ಎಂದರು.

ಬಳ್ಳಾರಿ ವಿಭಾಗದ ಉಪ ಅರಣ್ಯ ಸಂರಕ್ಷಣಾಧಿಕಾರಿ ಡಾ. ಬಸವರಾಜ ಕೆ.ಎನ್. ಮಾತನಾಡಿ, ಮಾನಸಿಕ ಒತ್ತಡದಿಂದ ದೂರವಿದ್ದು ಆರೋಗ್ಯಕರ ಜೀವನ ನಡೆಸುವ ಉದ್ದೇಶದಿಂದ ಇಂತಹ ಕ್ರೀಡಾಕೂಟಗಳನ್ನು ಆಯೋಜಿಸಲಾಗುತ್ತದೆ. ಯಾವುದೇ ಕ್ಷೇತ್ರದಲ್ಲಿ ಯಶಸ್ಸು ಸಾಧಿಸಲು ನಿರಂತರ ಅಭ್ಯಾಸ ಮತ್ತು ಪರಿಶ್ರಮ ಅಗತ್ಯ ಎಂದು ತಿಳಿಸಿದರು.

ಕಾರ್ಯಕ್ರಮದ ಆರಂಭದಲ್ಲಿ ಕ್ರೀಡಾಕೂಟದಲ್ಲಿ ಭಾಗವಹಿಸುವ ಕೋಟೆ, ದುರ್ಗಾ, ಸಂಸ್ಕೃತಿ, ಸ್ಪಂದನ, ವೇದಾವತಿ, ಸ್ಪಂದಗಿರಿ ಹಾಗೂ ತುಂಗಾ ತಂಡಗಳು ಪಥಸಂಚಲನ ಮೂಲಕ ಎಲ್ಲರ ಗಮನ ಸೆಳೆಯಿತು.

ಕ್ರೀಡಾಕೂಟದಲ್ಲಿ ಪೊಲೀಸ್ ಇಲಾಖೆಯ ವಿವಿಧ ಘಟಕಗಳ ಅಧಿಕಾರಿ ಮತ್ತು ಸಿಬ್ಬಂದಿಗಳು ವಿವಿಧ ಕ್ರೀಡಾ ಸ್ಪರ್ಧೆಗಳಲ್ಲಿ ಭಾಗವಹಿಸಲಿದ್ದಾರೆ.

ಈ ಸಂದರ್ಭದಲ್ಲಿ ಜಿಲ್ಲಾ ಪೊಲೀಸ್ ಅಧೀಕ್ಷಕಿ ಡಾ. ಸುಮನ್ ಡಿ. ಪೆನ್ನೇಕರ್, ಅಪರ ಜಿಲ್ಲಾಧಿಕಾರಿ ಮಹಮ್ಮದ್ ಝುಬೇರ್.ಎನ್., ಹೆಚ್ಚುವರಿ ಪೊಲೀಸ್ ಅಧೀಕ್ಷಕ ನವೀನ್ ಕುಮಾರ್ ಎನ್. ಸೇರಿದಂತೆ ಜಿಲ್ಲೆಯ ವಿವಿಧ ಪೊಲೀಸ್ ಅಧಿಕಾರಿಗಳು, ಸಿಬ್ಬಂದಿ ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದರು.

ಮಹಿಳೆಯರಷ್ಟೇ ಅಲ್ಲ, ಪುರುಷರಿಗೂ 'ಪೋಷ್' ಕಾಯ್ದೆಯ ಅರಿವು ಅತ್ಯಗತ್ಯ: ನ್ಯಾ. ಸಿದ್ದಲಿಂಗ ಪ್ರಭು

ಗಣಿನಾಡ ವಾಣಿ

ಬಳ್ಳಾರಿ,ನ.25(ಕರ್ನಾಟಕ ವಾರ್ತೆ): ಕೆಲಸದ ಸ್ಥಳಗಳಲ್ಲಿ ಮಹಿಳೆಯರ ಮೇಲಿನ ದೌರ್ಜನ್ಯ ತಡೆಗೆ ಜಾರಿಗೆ ಬಂದಿರುವ 2013ರ ಕಾಯ್ದೆ (ಪೋಷ್ ಆಕ್ಟ್) ಕುರಿತು, ಮಹಿಳೆಯರಷ್ಟೇ ಅಲ್ಲದೆ ಪುರುಷರೂ ಈ ಕಾಯ್ದೆಯ ಅರಿವು ಮತ್ತು ಜವಾಬ್ದಾರಿಗಳನ್ನು ಅರ್ಥಮಾಡಿಕೊಳ್ಳುವುದು ಅತ್ಯಗತ್ಯ ಎಂದು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷರಾದ ಸಿದ್ದಲಿಂಗ ಪ್ರಭು ಅವರು ಹೇಳಿದರು.

ಜಿಲ್ಲಾ ನ್ಯಾಯಾಂಗ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಹಾಗೂ ಬಳ್ಳಾರಿ ವಕೀಲರ ಸಂಘ ಇವರ ಸಂಯುಕ್ತಾಶ್ರಯದಲ್ಲಿ 'ಮಹಿಳೆಯರ ಮೇಲಿನ ದೌರ್ಜನ್ಯ ನಿರ್ಮೂಲನೆಗೆ ಅಂತರಾಷ್ಟ್ರೀಯ ದಿನ'ದ ಅಂಗವಾಗಿ 'ಕಾರ್ಯಸ್ಥಳದಲ್ಲಿ ಮಹಿಳೆಯರ ಮೇಲಿನ ಲೈಂಗಿಕ ಕಿರುಕುಳ (ತಡೆಗಟ್ಟುವಿಕೆ, ನಿಷೇಧ ಮತ್ತು ಪರಿಹಾರ) ತಡೆ ಕಾಯ್ದೆ – 2013' ಕುರಿತು ಜಿಲ್ಲಾ ನ್ಯಾಯಾಲಯದ ಸಭಾಂಗಣದಲ್ಲಿ ಬುಧವಾರ ಆಯೋಜಿಸಿದ್ದ ಕಾನೂನು ಅರಿವು ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಡಾ. ಸುಮನ್ ಡಿ. ಪೆನ್ನೇಕರ್ ಅವರು ಬಳ್ಳಾರಿಗೆ ಅಧಿಕಾರಿಯಾಗಿ ಆಗಮಿಸಿದ ಬಳಿಕ ಜಿಲ್ಲೆಯಲ್ಲಿ ಕಾನೂನು ಸುವ್ಯವಸ್ಥೆ ಕುರಿತಂತೆ ಕೈಗೊಂಡ ನಿರಂತರ ಸಭೆಗಳು ಮತ್ತು ಪರಿಣಾಮಕಾರಿ ಕ್ರಮಗಳ ಮೂಲಕ ಕಾನೂನು ಸುವ್ಯವಸ್ಥೆ ಪರಿಣಾಮಕಾರಿಯಾಗಿ ಕಾಪಾಡುತ್ತಿರುವುದನ್ನು



ಗಮನಿಸುತ್ತಿದ್ದೇವೆ ಹಾಗೂ ಪತ್ರಿಕೆಗಳಲ್ಲಿ ಓದುತ್ತಿದ್ದೇವೆ ಎಂದರು.

ನ್ಯಾಯಾಂಗ ಇಲಾಖೆಯೊಂದಿಗಿನ ಸಹಕಾರವನ್ನು ಸ್ಮರಿಸಿದ ಅವರು, ಬಾಲನ್ಯಾಯ ಮಂಡಳಿಯಲ್ಲಿ ಹೈಕೋರ್ಟ್ ನಿಂದ ನಿರಂತರ ರಿಮಾರ್ಕ್ಸ್‌ಗಳು ಬರುತ್ತಿದ್ದ ಸಂದರ್ಭದಲ್ಲಿ, ತಕ್ಷಣ ಸ್ಪಂದಿಸಿದ ಅವರು ಉತ್ತಮ ರೀತಿಯಲ್ಲಿ ಸಹಕರಿಸಿದರು. ಇದರಿಂದ ಮಂಡಳಿಯಲ್ಲಿದ್ದ 208 ಬಾಕಿ ಪ್ರಕರಣಗಳು ಇಂದು 21ಕ್ಕೆ ಇಳಿದಿವೆ. ಇದಕ್ಕಾಗಿ ಅವರಿಗೆ ಹಾಗೂ ಪೊಲೀಸ್ ಇಲಾಖೆಗೆ ಕೃತಜ್ಞತೆ ಸಲ್ಲಿಸುವುದಾಗಿ ತಿಳಿಸಿದರು.

ಕಾರ್ಯಸ್ಥಳದಲ್ಲಿ ಮಹಿಳೆಯರ ಮೇಲಿನ ಕಿರುಕುಳ ತಡೆ ಕಾಯ್ದೆ ಕುರಿತು, ತಾವು ಅಧಿಕಾರ ವಹಿಸಿಕೊಂಡ ದಿನದಿಂದಲೇ ಪ್ರತಿ ಸಭೆಯಲ್ಲೂ ಇಲಾಖೆಯ ಮುಖ್ಯಸ್ಥರು ಹಾಗೂ ಆಡಳಿತ ಶಿರಸ್ತೇದಾರರಿಗೆ ಮಹಿಳೆಯರ ಸುರಕ್ಷತೆ ಮತ್ತು ಕಿರುಕುಳಕ್ಕೆ ಸಂಬಂಧಿಸಿದಂತೆ ಯಾವುದೇ ದೂರುಗಳು ಬರದಂತೆ ಎಚ್ಚರ ವಹಿಸಲು ಸೂಚಿಸುತ್ತಿದ್ದು, ಇಲ್ಲಿಯವರೆಗೆ ಯಾವುದೇ ದೂರು ಬಂದಿಲ್ಲ, ಮುಂದೆಯೂ ಬರಬಾರದು ಎಂದು ಹೇಳಿದರು.

ಇದೇ ವೇಳೆ ನ್ಯಾಯಾಧೀಶರು, ರಾಷ್ಟ್ರೀಯ ಐಕ್ಯತೆಯ ಪ್ರಮಾಣ ವಚನ ಬೋಧಿಸಿದರು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ. ಸುಮನ್ ಡಿ. ಪೆನ್ನೇಕರ್ ಅವರು ಮುಖ್ಯ ಅತಿಥಿಗಳಾಗಿ ಭಾಗವಹಿಸಿ ಮಾತನಾಡಿ, ಕೆಲಸದ ಸ್ಥಳಗಳಲ್ಲಿ ಮಹಿಳೆಯರ ಮೇಲಿನ ದೌರ್ಜನ್ಯದ ಹಿನ್ನೆಲೆಯಲ್ಲಿ ವಿವಿಧ ಎನ್‌ಜಿಒಗಳು ಮತ್ತು ಗುಂಪುಗಳು ನಡೆಸಿದ ಹೋರಾಟದ ಫಲವಾಗಿ ಹಿಂದಿನ ಮಾರ್ಗಸೂಚಿಗಳು 2013ರಲ್ಲಿ ಕಾಯ್ದೆಯಾಗಿ ರೂಪುಗೊಂಡಿವೆ ಎಂದು ಹೇಳಿದರು.

ಸಾಮಾನ್ಯವಾಗಿ ಜಾಗೃತಿ ಕಾರ್ಯಾಗಾರಗಳಲ್ಲಿ ಮಹಿಳೆಯರನ್ನು ಮಾತ್ರ ಕೇಂದ್ರೀಕರಿಸಲಾಗುತ್ತದೆ. ಇಂದಿನ ಸಂಘಟಿತ ಮತ್ತು ಅಸಂಘಟಿತ ಕೆಲಸದ ಸ್ಥಳಗಳಲ್ಲಿ ಮಹಿಳೆಯರು ಮತ್ತು ಪುರುಷರು ಸಮಾನವಾಗಿ ಕಾರ್ಯನಿರ್ವಹಿಸುತ್ತಿರುವುದರಿಂದ ಪುರುಷರಿಗೂ ಈ ಕಾಯ್ದೆಯ ಮಾಹಿತಿ ಅತ್ಯಂತ ಮಹತ್ವದ್ದಾಗಿದೆ ಎಂದರು.

ಯಾವುದೇ ಮಾತು, ವರ್ತನೆ, ದೈಹಿಕ ಸ್ಪರ್ಶ, ಮುಜುಗರ ತರುವ ಫೋಟೋ/ವಿಡಿಯೋ ತೋರಿಸುವುದು ಅಥವಾ ಜೋಕ್ ಗಳಿಂದ ಮಹಿಳೆಗೆ ಅಸುರಕ್ಷತೆ ಅಥವಾ ಅಸಮಾಧಾನ ಉಂಟಾದರೆ ಅದು ದೌರ್ಜನ್ಯದ ವ್ಯಾಪ್ತಿಗೆ ಬರುತ್ತದೆ. ಉದ್ದೇಶ >>2

ರಕ್ತದಾನ ಜೀವದಾನ; ಯಾರೂ ಭಯಪಡದೆ ಮುಂದೆ ಬರಬೇಕು: ಶಾಸಕ ನಾರಾ ಭರತ್ ರೆಡ್ಡಿ

ಗಣಿನಾಡ ವಾಣಿ

ಬಳ್ಳಾರಿ,ನ.25(ಕರ್ನಾಟಕ ವಾರ್ತೆ): ರಕ್ತದ ಕೊರತೆಯ ಹಿನ್ನೆಲೆಯಲ್ಲಿ ರಾಜ್ಯಾದ್ಯಂತ ಹಮ್ಮಿಕೊಂಡಿರುವ ಮಹತ್ವದ ರಕ್ತದಾನ ಅಭಿಯಾನವನ್ನು ಯಶಸ್ವಿಗೊಳಿಸಲು ಸಾರ್ವಜನಿಕರು ಯಾವುದೇ ಭಯವಿಲ್ಲದೆ ಸ್ವಯಂಪ್ರೇರಿತವಾಗಿ ರಕ್ತದಾನಕ್ಕೆ ಮುಂದೆ ಬರಬೇಕು ಎ

ಚುಟುಕು ಸುದ್ದಿಗಳು

ಬಳ್ಳಾರಿಯಲ್ಲಿ ನ. 26ರಂದು ಸಂವಿಧಾನ ದಿನಾಚರಣೆ ಕಾರ್ಯಕ್ರಮ

ಗಣಿನಾಡ ವಾಣಿ

ಬಳ್ಳಾರಿ,ನ.24(ಕರ್ನಾಟಕ ವಾರ್ತೆ):

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಮತ್ತು ಸಮಾಜ ಕಲ್ಯಾಣ ಇಲಾಖೆ ವತಿಯಿಂದ ನವೆಂಬರ್ 26 ರಂದು ಬೆಳಿಗ್ಗೆ 10.30 ಗಂಟೆಗೆ ನಗರದ ಡಾ.ಜೋಳದ ರಾಶಿ ದೊಡ್ಡನಗೌಡ ರಂಗಮಂದಿರದಲ್ಲಿ 'ಸಂವಿಧಾನ ದಿನಾಚರಣೆ' ಕಾರ್ಯಕ್ರಮ ಆಯೋಜಿಸಲಾಗಿದೆ.

ಸಂವಿಧಾನದ ಆಶಯಗಳಾದ ಸಮಾನತೆ, ಏಕತೆ ಹಾಗೂ 'ನಾವೆಲ್ಲರೂ ಒಂದೇ' ಎಂಬ ಭಾವನೆಯನ್ನು ಜನರಲ್ಲಿ ಅರಳಿಸುವ ಉದ್ದೇಶದಿಂದ ಈ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ.

ಕಾರ್ಯಕ್ರಮದಲ್ಲಿ ಜಿಲ್ಲಾ ಮಟ್ಟದ ಅಧಿಕಾರಿಗಳು, ಸಿಬ್ಬಂದಿಗಳು, ಶಾಲಾ–ಕಾಲೇಜುಗಳ ವಿದ್ಯಾರ್ಥಿಗಳು, ವಿವಿಧ ಸಂಘ–ಸಂಸ್ಥೆಗಳ ಮುಖಂಡರು ಹಾಗೂ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ಕಾರ್ಯಕ್ರಮವನ್ನು ಯಶಸ್ವಿಗೊಳಿಸುವಂತೆ ಸಮಾಜ ಕಲ್ಯಾಣ ಇಲಾಖೆಯ ಉಪ ನಿರ್ದೇಶಕರು ಪ್ರಕಟಣೆಯಲ್ಲಿ ಕೋರಿದ್ದಾರೆ.

ಬಳ್ಳಾರಿ ನಗರದಲ್ಲಿ ಟಾಸ್ಕ್ ಫೋರ್ಸ್ ಕಾರ್ಯಾಚರಣೆ: 03 ಬಾಲಕಾರ್ಮಿಕ ಮತ್ತು ಕಿಶೋರ ಕಾರ್ಮಿಕ ಮಕ್ಕಳ ರಕ್ಷಣೆ

ಗಣಿನಾಡ ವಾಣಿ

ಬಳ್ಳಾರಿ,ನ.24(ಕರ್ನಾಟಕ ವಾರ್ತೆ):

ಜಿಲ್ಲಾಧಿಕಾರಿಗಳ ನಿರ್ದೇಶನದ ಮೇರೆಗೆ ಬಳ್ಳಾರಿ ನಗರದ ವಿವಿಧೆಡೆ ಬಾಲಕಾರ್ಮಿಕ ಹಾಗೂ ಕಿಶೋರ ಕಾರ್ಮಿಕರ ಟಾಸ್ಕ್ ಫೋರ್ಸ್ ಸಮಿತಿ ತಂಡವು ಮಂಗಳವಾರ ದಿಢೀರ್ ಭೇಟಿ ನೀಡಿ ಕಾರ್ಯಾಚರಣೆ ನಡೆಸಿದ್ದು, ಕೆಲಸ ಮಾಡುತ್ತಿದ್ದ 03 ಮಕ್ಕಳನ್ನು ರಕ್ಷಿಸಿದೆ.

ನಗರದ ಕಪ್ಪಗಲ್ಲು ರಸ್ತೆ, ತಾಳೂರು ರಸ್ತೆ ಹಾಗೂ ಮೋಕ ರಸ್ತೆಯ ಪ್ರಮುಖ ಬೀದಿಗಳಲ್ಲಿರುವ ಉದ್ದಿಮೆಗಳ ಮೇಲೆ ಟಾಸ್ಕ್ ಫೋರ್ಸ್ ಸಮಿತಿ ತಂಡವು ದಾಳಿ ನಡೆಸಿ ಪರಿಶೀಲನೆ ನಡೆಸಿತು. ಈ ಸಂದರ್ಭದಲ್ಲಿ ಅಲ್ಲಿ ಕೆಲಸ ನಿರ್ವಹಿಸುತ್ತಿದ್ದ 03 ಬಾಲಕಾರ್ಮಿಕ ಮತ್ತು ಕಿಶೋರ ಕಾರ್ಮಿಕ ಮಕ್ಕಳನ್ನು ತಕ್ಷಣವೇ ವಶಕ್ಕೆ ಪಡೆದು, ಸ್ಥಳದಲ್ಲಿಯೇ ಅವರ ಹೇಳಿಕೆಗಳನ್ನು ದಾಖಲಿಸಿಕೊಳ್ಳಲಾಯಿತು. ನಂತರ ರಕ್ಷಿಸಲ್ಪಟ್ಟ ಮಕ್ಕಳನ್ನು ಮುಂದಿನ ಕ್ರಮಕ್ಕಾಗಿ ಮಕ್ಕಳ ಕಲ್ಯಾಣ ಸಮಿತಿಯ ಮುಂದೆ ಹಾಜರುಪಡಿಸಲಾಗಿದೆ ಎಂದು ಜಿಲ್ಲಾ ಬಾಲಕಾರ್ಮಿಕ ಯೋಜನೆಯ ಯೋಜನಾ ನಿರ್ದೇಶಕ ಮೌನೇಶ್ ತಿಳಿಸಿದ್ದಾರೆ.

ಇದೇ ವೇಳೆ, ಬಾಲಕಾರ್ಮಿಕ ಪದ್ಧತಿ ನಿರ್ಮೂಲನೆ ಕುರಿತು ಎಲ್ಲಾ ಉದ್ದಿಮೆಗಳ ಮಾಲೀಕರಿಗೆ ಕರಪತ್ರ ಹಾಗೂ ಪೋಸ್ಟರ್ ಗಳನ್ನು ವಿತರಿಸುವ ಮೂಲಕ ಜಾಗೃತಿ ಮೂಡಿಸಲಾಯಿತು.

ಈ ಟಾಸ್ಕ್ ಫೋರ್ಸ್ ಕಾರ್ಯಾಚರಣೆಯಲ್ಲಿ ಬಳ್ಳಾರಿ 1ನೇ ವೃತ್ತದ ಕಾರ್ಮಿಕ ನಿರೀಕ್ಷಕ ರಮೇಶ್, ಮಕ್ಕಳ ರಕ್ಷಣಾ ಘಟಕದ ಸಿಬ್ಬಂದಿ ನಿಲೋಫಿಯಾ, ಮಕ್ಕಳ ಸಹಾಯವಾಣಿ ಸಿಬ್ಬಂದಿ ಚಂದ್ರಕಲಾ, ರೀಚ್ ಸಂಸ್ಥೆಯ ಸಂಯೋಜಕರಾದ ಬಸಮ್ಮ, ಪ್ಯಾರಾ ಲೀಗಲ್ ಸ್ವಯಂ ಸೇವಕಿ ಲಕ್ಷಿ □□ೀ, ಬಾಲಕಾರ್ಮಿಕ ಯೋಜನಾ ಸಿಬ್ಬಂದಿ ಶ್ರೀನಿವಾಸ ಹಾಗೂ ವಿವಿಧ ಇಲಾಖೆಯ ಅಧಿಕಾರಿಗಳು ಪಾಲ್ಗೊಂಡಿದ್ದರು.

ಅನಾಮಧೇಯ ಮೃತ ವೃದ್ಧನ ವಾರಸುದಾರರ ಪತ್ತೆಗೆ ಮನವಿ

ಗಣಿನಾಡ ವಾಣಿ

ಬಳ್ಳಾರಿ,ನ.25(ಕರ್ನಾಟಕ ವಾರ್ತೆ):

ತೋರಣಗಲ್ಲು ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ಅಂದಾಜು 70 ರಿಂದ 75 ವರ್ಷದ ಅನಾಮಧೇಯ ವೃದ್ಧನು ನ.23 ರಂದು ತೋರಣಗಲ್ಲು ಆರ್.ಎಸ್.ನ ಬಾಬ ನಗರ ಕೆಜಿಎನ್ ಹಾರ್ಡ್ ವೇರ್ ಹತ್ತಿರ ಅಸ್ವಸ್ಥನಾಗಿದ್ದರಿಂದ ಸಾರ್ವಜನಿಕರು ತೋರಣಗಲ್ಲು ಗ್ರಾಮದ ಸರ್ಕಾರಿ ಆಸ್ಪತ್ರೆಗೆ ಚಿಕಿತ್ಸೆಗೆ ದಾಖಲಿಸಲಾಗಿದ್ದು, ಚಿಕಿತ್ಸೆ ಫಲಕಾರಿಯಾಗದೆ ಅನಾಮಧೇಯ ವೃದ್ಧನು ಮೃಪಟ್ಟಿರುವ ಕುರಿತು ಪ್ರಕರಣ ದಾಖಲಾಗಿದ್ದು, ವಾರಸುದಾರರ ಪತ್ತೆಗೆ ಸಾರ್ವಜನಿಕರು ಸಹಕರಿಸಬೇಕು ಎಂದು ಸಬ್ ಇನ್ಸ್ಪೆಕ್ಟರ್ ಮನವಿ ಮಾಡಿದ್ದಾರೆ.

ಚಹರೆ ಗುರುತು:–

ಸುಮಾರು 5.5 ಅಡಿ ಎತ್ತರ, ಸಾಧಾರಣ ಮೈಕಟ್ಟು, ಕಪ್ಪು ಮೈಬಣ್ಣ, ಕೋಲು–ಮುಖ ಹೊಂದಿದ್ದು, ಬಿಳಿ ಬಣ್ಣದ ಶರ್ಟ್ ಮತ್ತು ನೀಲಿ ಬಣ್ಣದ ಬರ್ಮೂಡ ಧರಿಸಿರುತ್ತಾರೆ. ಮೃತ ಅನಾಮಧೇಯ ವೃದ್ಧನ ವಾರಸುದಾರರ ಬಗ್ಗೆ ಮಾಹಿತಿ ಸಿಕ್ಕಲ್ಲಿ ತೋರಣಗಲ್ಲು ಪೊಲೀಸ್ ಠಾಣೆ ದೂ.08395–258100, ಮೊ.9480803062 ಗೆ ಅಥವಾ ಬಳ್ಳಾರಿ ಕಂಟ್ರೋಲ್ ರೂಂ ದೂ.9480803000 ಗೆ ಸಂಪರ್ಕಿಸಬಹುದು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಅಂಚೆ ಇಲಾಖೆಯ ನಿವೃತ್ತ ನೌಕರರಿಗಾಗಿ ಡಿ.8ರಂದು ಪಿಂಚಣಿ ಅದಾಲತ್

ಗಣಿನಾಡ ವಾಣಿ

ಬಳ್ಳಾರಿ,ನ.25(ಕರ್ನಾಟಕ ವಾರ್ತೆ):

ಅಂಚೆ ಇಲಾಖೆಯಿಂದ ನಿವೃತ್ತರಾಗಿ ಸರ್ಕಾರದಿಂದ ಪಿಂಚಣಿ ಪಡೆಯುತ್ತಿರುವ ಇಲಾಖಾ ನೌಕರರು ಹಾಗೂ ಕುಟುಂಬ ಪಿಂಚಣಿ ಪಡೆಯುತ್ತಿರುವ ನಿವೃತ್ತ ಅಂಚೆ ನೌಕರರ ಕುಟುಂಬದವರಿಗಾಗಿ ಡಿಸೆಂಬರ್ 08 ರಂದು ಸಂಜೆ 4 ಗಂಟೆಗೆ ಬಳ್ಳಾರಿ ವಿಭಾಗೀಯ ಕಚೇರಿಯಲ್ಲಿ ಪಿಂಚಣಿ ಅದಾಲತ್ ಆಯೋಜಿಸಲಾಗಿದೆ.

ಪಿಂಚಣಿದಾರರಿಗೆ ಯಾವುದೇ ಕುಂದುಕೊರತೆಗಳಿದ್ದಲ್ಲಿ, ಡಿಸೆಂಬರ್ 4ರೊಳಗೆ ತಲುಪುವಂತೆ ಪತ್ರದ ಮೂಲಕ ಅಥವಾ ಜಠಛಚಿಟಟಚಿಡಿ.ಇಚಿ@ಟಜಿಚಿಠಿಣ. ಠಠತಿ.ಟಟಿ ಇ–ಮೇಲ್ ವಿಳಾಸಕ್ಕೆ ಕಳುಹಿಸಿಕೊಡಬೇಕು. ಅರ್ಜಿಗಳನ್ನು ಅಂಚೆ ಅಧೀಕ್ಷಕರು, ಬಳ್ಳಾರಿ ವಿಭಾಗ, ವಿಭಾಗೀಯ ಕಾರ್ಯಾಲಯ, ಕೋಟೆ, ಬಳ್ಳಾರಿ ಇವರಿಗೆ ಸಲ್ಲಿಸಬೇಕು.

ನಂತರ ಪಿಂಚಣಿದಾರರು ತಮ್ಮ ಅಹವಾಲಿನೊಂದಿಗೆ ಡಿಸೆಂಬರ್ 8ರಂದು ಸಂಜೆ 4 ಗಂಟೆಗೆ ಅಂಚೆ ಅಧೀಕ್ಷಕರ ಕಚೇರಿಗೆ ಭೇಟಿ ನೀಡಬಹುದಾಗಿದೆ.

ಪಿಂಚಣಿ ಅದಾಲತ್ ನಲ್ಲಿ ಭಾಗವಹಿಸುವವರಿಗೆ ಯಾವುದೇ ತರಹದ ಭತ್ಯೆ ನೀಡಲಾಗುವುದಿಲ್ಲ ಎಂದು ಬಳ್ಳಾರಿ ವಿಭಾಗದ ಅಂಚೆ ಅಧೀಕ್ಷಕರ ಕಚೇರಿಯ ಅಂಚೆ ಅಧೀಕ್ಷಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಒಂದನೇ ಪುಟದಿಂದ

ಬಳ್ಳಾರಿ ನಗರ ಕೇಂದ್ರ ಗ್ರಂಥಾಲಯದಲ್ಲಿ ರಾಷ್ಟ್ರೀಯ ಗ್ರಂಥಾಲಯ ಸಪ್ತಾಹ–2026 ಪ್ರಶಸ್ತಿ ಪ್ರಧಾನ ಸಮಾರಂಭ

ಾಲಯಾಧಿಕಾರಿ ಡಾ. ನರಸಣ್ಣ ಪ್ರಾಸ್ತಾವಿಕವಾಗಿ ಮಾತನಾಡಿ, ರಾಜ್ಯ, ಜಿಲ್ಲೆ ಹಾಗೂ ನಗರದ ಗ್ರಂಥಾಲಯಗಳ ಅಂಕಿ–ಅಂಶಗಳನ್ನು ನೀಡಿದ ಅವರು, ಕಳೆದ ನಾಲ್ಕು ವರ್ಷಗಳಲ್ಲಿ ಗ್ರಂಥಾಲಯದ ಅಭಿವೃದ್ಧಿ ಕಾರ್ಯಗಳ ಜತೆಗೆ ಕಳೆದ ವರ್ಷ ಪ್ರಥಮ ಬಾರಿಗೆ ಓದುಗರಿಗೆ ಪುಸ್ತಕ ಮಾಹಿತಿಗಾಗಿ ಗ್ರಂಥಾಲಯ ಮಾಹಿತಿ ಕಿಯೋಸ್ಕ್ ಅಳವಡಿಸಲಾಗಿದ್ದು, ಎಲ್ಲರೂ ಇದರ ಪ್ರಯೋಜನ ಪಡೆಯುತ್ತಿದ್ದಾರೆ ಎಂದರು.

ನ. 14ರಂದು ಜಿಲ್ಲಾ ಕೇಂದ್ರ ಗ್ರಂಥಾಲಯದ ಉಪನಿರ್ದೇಶಕಿ ಶ್ರೀಮತಿ ಬಿ.ಕೆ. ಲಕ್ಷ್ಮೀಕಿರಣ್ ಅವರು ಪುಸ್ತಕ ಪ್ರದರ್ಶನಕ್ಕೆ ಚಾಲನೆ ನೀಡಿದ ವಿಚಾರವನ್ನು ಪ್ರಸ್ತಾಪಿಸಿದರು.

ವೀರಶೈವ ಮಹಾವಿದ್ಯಾಲಯದ ನಿವೃತ್ತ ಹಿರಿಯ ಗ್ರಂಥಪಾಲಕ ಡಾ. ಬಿ.ಆರ್. ಗದಗಿನ್ ಅವರು "ಸಾರ್ವಜನಿಕ ಗ್ರಂಥಾಲಯಗಳ ಕುರಿತು" ವಿಶೇಷ ಉಪನ್ಯಾಸ ನೀಡಿ, ನಗರ ಹಾಗೂ ಗ್ರಾಮೀಣ ಗ್ರಂಥಾಲಯಗಳ ಮಹತ್ವ ಮತ್ತು ಓದುವ ಸಂಸ್ಕೃತಿಯ ಬಗ್ಗೆ ವಿವರಿಸಿದರು.

ನಗರ ಗ್ರಂಥಾಲಯ ಪ್ರಾಧಿಕಾರದ ಸದಸ್ಯ ಹಾಗೂ ನಿವೃತ್ತ ಉಪನ್ಯಾಸಕ ಎನ್. ಬಸವರಾಜ ಮಾತನಾಡಿ, ಓದುವ ಹವ್ಯಾಸ ರೂಢಿಸಿಕೊಂಡು ಗ್ರಂಥಾಲಯ ಸೌಲಭ್ಯ ಬಳಸಿಕೊಳ್ಳುವುದರಿಂದ ಭಾರತ ವಿಶ್ವಗುರುವಾಗಲು ಸಾಧ್ಯವಾಗುತ್ತದೆ ಎಂದರು.

ಸಮಾರಂಭದ ಅಧ್ಯಕ್ಷತೆ ವಹಿಸಿದ್ದ ಜಿಲ್ಲಾ ಕೇಂದ್ರ ಗ್ರಂಥಾಲಯದ ಉಪನಿರ್ದೇಶಕಿ ಬಿ.ಕೆ. ಲಕ್ಷ್ಮೀಕಿರಣ್ ಅವರು, ವಿದ್ಯಾರ್ಥಿಗಳು ಗ್ರಂಥಾಲಯವನ್ನು ಸದುಪಯೋಗಪಡಿಸಿಕೊಂಡು ಭವ್ಯ ಭವಿಷ್ಯ ರೂಪಿಸಿಕೊಳ್ಳಬೇಕು ಹಾಗೂ ಸಾರ್ವಜನಿಕರು ಸದಸ್ಯತ್ವ ನೋಂದಾಯಿಸಿಕೊಳ್ಳಬೇಕು ಎಂದು ತಿಳಿಸಿದರು.

ಸಪ್ತಾಹದ ಅಂಗವಾಗಿ ಕಾಲೇಜು ವಿದ್ಯಾರ್ಥಿಗಳಿಗೆ "ವಿದ್ಯಾರ್ಥಿ ಜೀವನದಲ್ಲಿ ಗ್ರಂಥಾಲಯಗಳ ಪ್ರಾಮುಖ್ಯತೆ" ವಿಷಯದ ಮೇಲೆ ಏರ್ಪಡಿಸಿದ್ದ ಪ್ರಬಂಧ ಸ್ಪರ್ಧೆಯ ವಿಜೇತರು, ಉತ್ತಮ ಓದುಗರು ಹಾಗೂ ಉತ್ತಮ ಸಾಧಕರಿಗೆ ಪ್ರಶಸ್ತಿ ಪ್ರದಾನ ಮಾಡಲಾಯಿತು.

ಉತ್ತಮ ಸಾಧಕರು ಪ್ರಶಸ್ತಿ: ಸಂಡೂರು ತಾಲೂಕಿನ ವಿಠಲಾಪುರ ಗ್ರಾಮ ಪಂಚಾಯಿತಿ ಪಿಡಿಒ ಸಿಂಧು ಕೆ.ಎಸ್. ಮತ್ತು ಬಳ್ಳಾರಿ ಸಂಚಾರಿ ಪೊಲೀಸ್ ಠಾಣೆಯ ಕಾನ್ಸ್ಟೇಬಲ್ ಆರ್. ಶ್ರೀನಿವಾಸ ಮಾತನಾಡಿ, ತಾವು ಇದೇ ಗ್ರಂಥಾಲಯದಲ್ಲಿ ಅಭ್ಯಾಸ ಮಾಡಿ ಸರ್ಕಾರಿ ಹುದ್ದೆ ಪಡೆದಿದ್ದು, ಇಲ್ಲಿನ ಓದಿನ ವಾತಾವರಣ ಹಾಗೂ ಸಿಬ್ಬಂದಿ ಸಹಕಾರ ಉದ್ಯೋಗಾಕಾಂಕ್ಷಿಗಳಿಗೆ ಪೂರಕವಾಗಿದೆ ಎಂದರು.

ಉತ್ತಮ ಓದುಗರು ಪ್ರಶಸ್ತಿ: ಶ್ರೀ ಗುರು ತಿಪ್ಪೇರುದ್ರ ಡಿಗ್ರಿ ಕಾಲೇಜಿನ ಕನ್ನಡ ಸಹಾಯಕ ಪ್ರಾಧ್ಯಾಪಕಿ ಪುಷ್ಪ ಜಿ.ಬಿ. ಅವರು ಇಲ್ಲಿನ ಪುಸ್ತಕಗಳ ನೆರವಿನಿಂದ ಎಂ.ಎ. ಹಾಗೂ ಮೊದಲ ಪ್ರಯತ್ನದಲ್ಲೇ ನೆಟ್ ಪರೀಕ್ಷೆ ಉತ್ತೀರ್ಣರಾದ ಅನುಭವ ಹಂಚಿಕೊಂಡರು. ಬಿಎಸ್ಎನ್ಎಲ್ ಉಪವಿಭಾಗದ ನಿವೃತ್ತ ಅಭಿಯಂತರ ಸದಾಶಿವ ಮೂರ್ತಿ ವಿ.ಹೆಚ್.ಎಂ. ಅವರು ಯುವಕರು ಮೊಬೈಲ್ ಬದಿಗಿಟ್ಟು ಪುಸ್ತಕ ಹಿಡಿಯುವಂತೆ ಕರೆ ನೀಡಿದರು.

ಗ್ರಂಥಾಲಯ ಸಹಾಯಕ ಸಿದ್ದಪ್ಪ ಕೆ. ಕಾರ್ಯಕ್ರಮ ನಿರೂಪಿಸಿದರು. ಗ್ರಂಥಾಲಯ ಸಹಾಯಕ ಸಂತೋಷ್ ಕುಮಾರ್ ಎಸ್., ಗ್ರಂಥಪಾಲಕಿ ಶಾರದ ಆರ್., ದ್ವಿ.ದ.ಸ. ಡೊಳ್ಳಿನ ಮಹೇಂದ್ರ ಪ್ರಶಸ್ತಿ ವಿತರಣೆಯಲ್ಲಿ ಸಹಕರಿಸಿದರು. ಕೆ. ಸುನಿತ ಪ್ರಾರ್ಥನಾ ಗೀತೆ ಹಾಡಿದರು. ಗ್ರಂಥಪಾಲಕ ಎಸ್.ಟಿ. ಪ್ರಭಾಕರ್ ವಂದಿಸಿದರು.

ಕಾರ್ಯಕ್ರಮದಲ್ಲಿ ಶ್ರೀನಿವಾಸ, ಸಂತೋಷ್, ವಿವಿಧ ಕಾಲೇಜುಗಳ ಉಪನ್ಯಾಸಕರು, ವಿದ್ಯಾರ್ಥಿಗಳು, ಜಿಲ್ಲಾ/ನಗರ ಕೇಂದ್ರ ಗ್ರಂಥಾಲಯ ಸಿಬ್ಬಂದಿ ಹಾಗೂ ಓದುಗರು ಪಾಲ್ಗೊಂಡಿದ್ದರು.

ಮಹಿಳೆಯರಷ್ಟೇ ಅಲ್ಲ, ಪುರುಷರಿಗೂ 'ಪೋಷ್' ಕಾಯ್ದೆಯ ಅರಿವು ಅತ್ಯಗತ್ಯ: ನ್ಯಾ. ಸಿದ್ದಲಿಂಗ ಪ್ರಭು

'ಕ್ಯಾಶುಯಲ್' ಆಗಿದ್ದರೂ, ಅದರಿಂದ ಮಹಿಳೆಗೆ ಉಂಟಾಗುವ ಪರಿಣಾಮ ಮತ್ತು ಭಾವನೆಯೇ ಇಲ್ಲಿ ಮುಖ್ಯವಾಗುತ್ತದೆ. ಬಡ್ತಿ, ವೇತನ ಹೆಚ್ಚಳ, ವರ್ಗಾವಣೆ ಅಥವಾ ರಜೆ ನೀಡುವ ನೆಪದಲ್ಲಿ ಪ್ರತಿಯಾಗಿ ಅನುಕೂಲ ಕೇಳುವಂತಹ ಪ್ರಕರಣಗಳೂ ಕಾಯ್ದೆಯಡಿ ಗಂಭೀರ ಸ್ವರೂಪದ್ದಾಗಿವೆ ಎಂದು ತಿಳಿಸಿದರು.

10ಕ್ಕಿಂತ ಹೆಚ್ಚು ಮಹಿಳಾ ಉದ್ಯೋಗಿಗಳಿರುವ ಸಂಸ್ಥೆಗಳಲ್ಲಿ ಆಂತರಿಕ ದೂರು ಸಮಿತಿ ಕಡ್ಡಾಯವಾಗಿರಬೇಕು. ದೂರನ್ನು ಕಡ್ಡಾಯವಾಗಿ ಲಿಖಿತ ರೂಪದಲ್ಲಿಯೇ ನೀಡಬೇಕು. ಇತ್ತೀಚಿನ ಘಟನೆ ನಡೆದ ಮೂರು ತಿಂಗಳೊಳಗೆ ದೂರು ದಾಖಲಿಸಬೇಕು. ದೂರು ಸ್ವೀಕರಿಸಿದ 90 ದಿನಗಳೊಳಗೆ ಸಮಿತಿಯು ವಿಚಾರಣೆ ಪೂರ್ಣಗೊಳಿಸಿ ವರದಿ ಸಲ್ಲಿಸಬೇಕು. ಆರೋಪ ಸಾಬೀತಾದರೆ ಮುಂದಿನ 60 ದಿನಗಳೊಳಗೆ ಶಿಸ್ತು ಕ್ರಮ ಕೈಗೊಳ್ಳಬೇಕು. ಉದ್ಯೋಗದಾತರ ವಿರುದ್ಧವೇ ದೂರು ಇದ್ದರೆ ಅಥವಾ 10ಕ್ಕಿಂತ ಕಡಿಮೆ ಉದ್ಯೋಗಿಗಳಿರುವ ಕಡೆಗಳಲ್ಲಿ ಜಿಲ್ಲಾ ಮಟ್ಟದ ಸ್ಥಳೀಯ ಸಮಿತಿ ಮೂಲಕ ಪರಿಹಾರ ಕೋರಬಹುದು ಎಂದು ತಿಳಿಸಿದರು.

ಕಾಯ್ದೆಯ ನಿಬಂಧನೆಗಳನ್ನು ಸಕಾರಾತ್ಮಕವಾಗಿ ಮತ್ತು ಸುರಕ್ಷಿತ ಕೆಲಸದ ವಾತಾವರಣ ನಿರ್ಮಾಣಕ್ಕಾಗಿ ಬಳಸಿಕೊಳ್ಳಬೇಕು. ವೈಯಕ್ತಿಕ ಕಾರಣಗಳಿಗಾಗಿ ಅಥವಾ ಒತ್ತಡ ಹೇರಲು ಸುಳ್ಳು ಆರೋಪಗಳನ್ನು ಹೊರಿಸುವುದು ಸರಿಯಲ್ಲ. ಮೇಲ್ವಿಚಾರಣಾ ಹುದ್ದೆಯಲ್ಲಿರುವವರು ಹಾಗೂ ಎಲ್ಲಾ ಸಿಬ್ಬಂದಿ ಮುಂಚಿತವಾಗಿಯೇ ಎಚ್ಚರಿಕೆ ಮತ್ತು ತಿಳಿವಳಿಕೆ ನೀಡುವ ಮೂಲಕ ಆರೋಗ್ಯಕರ ಕಾರ್ಯಕ್ಷೇತ್ರವನ್ನು ರೂಪಿಸಬೇಕು ಎಂದು ಸಲಹೆ ನೀಡಿದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಮತ್ತು ಹಿರಿಯ ಸಿವಿಲ್ ನ್ಯಾಯಾಧೀಶರಾದ ರಾಜೇಶ್ ಎನ್. ಹೊಸಮನೆ ಸೇರಿದಂತೆ ಬಳ್ಳಾರಿಯ ಎಲ್ಲಾ ನ್ಯಾಯಾಲಯಗಳ ನ್ಯಾಯಾಧೀಶರು ಮತ್ತು ಜಿಲ್ಲಾ ನ್ಯಾಯಾಲಯ ಸಂಕೀರ್ಣದ ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು.

ರಕ್ತದಾನ ಜೀವದಾನ; ಯಾರೂ ಭಯಪಡದೆ ಮುಂದೆ ಬರಬೇಕು: ಶಾಸಕ ನಾರಾ ಭರತ್ ರೆಡ್ಡಿ

ದಿನಗಳಲ್ಲೂ ಎಲ್ಲಾ ಸಂಘ–ಸಂಸ್ಥೆಗಳು ಮತ್ತು ನಾಗರಿಕರು ಕೈಜೋಡಿಸಿ ರಕ್ತದಾನಕ್ಕೆ ಮುಂದಾಗಬೇಕು ಎಂದು ಮನವಿ ಮಾಡಿದರು.

ಶಿಬಿರದಲ್ಲಿ ರಕ್ತದಾನ ಮಾಡುವವರಿಗಾಗಿ ನೋಂದಣಿ ವ್ಯವಸ್ಥೆ ಮಾಡಲಾಗಿದ್ದು, ಮಹಾನಗರ ಪಾಲಿಕೆಯ ಮೇಯರ್ ಪಿ.ಗಾದೆಪ್ಪ, ಮಹಾನಗರ ಪಾಲಿಕೆಯ ಆಯುಕ್ತ ಪಿ.ಎಸ್. ಮಂಜುನಾಥ್, ಸಹಾಯಕ ಆಯುಕ್ತ ರಾಜೇಶ್ ಹೆಚ್.ಡಿ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿ– ಸಿಬ್ಬಂದಿ ವರ್ಗ ಹಾಗೂ ಸಾರ್ವಜನಿಕರು ಭಾಗವಹಿಸಿ ರಕ್ತ ದಾನ ಮಾಡಿದರು. ರಕ್ತದಾನ ಮಾಡಿದವರಿಗೆ ಪ್ರಮಾಣ ಪತ್ರ ಹಾಗೂ ಜ್ಯೂಸ್ ವಿತರಿಸಲಾಯಿತು.

ಬಳ್ಳಾರಿ ನಗರದ ಹೊಸ ಜಿಲ್ಲಾಧಿಕಾರಿಗಳ ಕಚೇರಿ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳ ಕಚೇರಿ, ಕೃಷಿ ಮಾರುಕಟ್ಟೆ, ಜಿಲ್ಲಾ ಆಸ್ಪತ್ರೆ, ಬಿಐಟಿಎಂ ಕಾಲೇಜು, ಶ್ರೀ ಕೃಷ್ಣದೇವರಾಯ ವಿಶ್ವವಿದ್ಯಾಲಯ, ಬಿಎಂಸಿಆರ್ಸಿ, ಕೌಲ್ ಬಜಾರ್, ಗಾಂಧಿನಗರ ಸುವರ್ಣ ಇಂಟರ್ ನ್ಯಾಷನಲ್ ಶಾಲೆ, ಕುಡತಿನಿಯ ಕೆಪಿಟಿಸಿಎಲ್. ಸಿರುಗುಪ್ಪದ ಕಿಷ್ಕಂದಾ ವಿಶ್ವವಿದ್ಯಾಲಯ, ಬಸ್ ನಿಲ್ದಾಣ. ಸಂಡೂರಿನ ಎನ್ ಎಮ್ ಡಿ ಸಿ, ಶ್ರೀ ಕುಮಾರಸ್ವಾಮಿ ದೇವಸ್ಥಾನ, ತೋರಣಗಲ್ಲು ಸಂಜೀವಿನಿ ಆಸ್ಪತ್ರೆ, ಕುರುಗೋಡು ಪಟ್ಟಣದ ಈಶ್ವರ್ ಪಾರ್ಕ್ ಹತ್ತಿರ ಹಳೆ ಬಸ್ ನಿಲ್ದಾಣ. ಕಂಪ್ಲಿ ತಾಲೂಕಿನ ಪ್ರಾಥಮಿಕ ಆರೋಗ್ಯ ಕೇಂದ್ರ ಎಮ್ಮಿಗನೂರು ಸೇರಿದಂತೆ 20 ಸ್ಥಳಗಳಲ್ಲಿ ರಕ್ತದಾನ ಶಿಬಿರಗಳನ್ನು ಆಯೋಜಿಸಲಾಗಿತ್ತು.

ಈ ಸಂದರ್ಭದಲ್ಲಿ ಮಹಾನಗರ ಪಾಲಿಕೆ ಮೇಯರ್ ಪಿ.ಗಾದೆಪ್ಪ, ಜಿಲ್ಲಾ ಆಸ್ಪತ್ರೆಯ ಜಿಲ್ಲಾ ಶಸ್ತ್ರಚಿಕಿತ್ಸಕ ಡಾ.ಎನ್ ಬಸರೆಡ್ಡಿ, ಜಿಲ್ಲಾ ಆರ್.ಸಿ.ಹೆಚ್ ಅಧಿಕಾರಿ ಡಾ.ವೀರ ಕುಮಾರ್ ರೆಡ್ಡಿ, ಜಿಲ್ಲಾ ಸಹಾಯಕ ಔಷಧ ನಿಯಂತ್ರಣಾಧಿಕಾರಿ ಡಾ.ಮಂಜುಳಾ, ಜಿಲ್ಲಾ ಆಸ್ಪತ್ರೆಯ ರಕ್ತ ಕೇಂದ್ರದ ವೈದ್ಯಾಧಿಕಾರಿ ಡಾ.ಉದಯ್ ಶಂಕರ್ ಸೇರಿದಂತೆ ಇತರೆ ಅಧಿಕಾರಿ– ಸಿಬ್ಬಂದಿ, ಕಾಲೇಜು ವಿದ್ಯಾರ್ಥಿಗಳು ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದರು.

ಕೆಪಿಎಸ್ ಹೆಸರಿನಲ್ಲಿ ಸರ್ಕಾರಿ ಶಾಲೆಗಳಿಗೆ ಮುಚ್ಚುಗಡೆಯ ಭೀತಿ!

ಕಾಂಗ್ರೆಸ್ ಸರ್ಕಾರದ ವಿರುದ್ಧ ಎಐಡಿಎಸ್ಓ ಕಿಡಿ; ಬಳ್ಳಾರಿ ಜಿಲ್ಲೆಯಲ್ಲೇ 500ಕ್ಕೂ ಅಧಿಕ ಶಾಲೆಗಳ ಭವಿಷ್ಯ ಅತಂತ್ರ?

ಗಣಿನಾಡ ವಾಣಿ

ಬಳ್ಳಾರಿ, ನ.25: ಕರ್ನಾಟಕ ಪಬ್ಲಿಕ್ ಸ್ಕೂಲ್ (ಕೆಪಿಎಸ್) ಮ್ಯಾಗ್ನೆಟ್ ಯೋಜನೆಯ ಹೆಸರಿನಲ್ಲಿ ರಾಜ್ಯದ ಸರ್ಕಾರಿ ಶಾಲೆಗಳನ್ನು ಹಂತ ಹಂತವಾಗಿ ಮುಚ್ಚುವ ಹುನ್ನಾರ ನಡೆಯುತ್ತಿದೆ. ಈ ಯೋಜನೆ ಜಾರಿಯಾದರೆ ಬಳ್ಳಾರಿ ಜಿಲ್ಲೆಯೊಂದರಲ್ಲೇ 500

ಮಕ್ಕಳೊಂದಿಗೆ ಮಗುವಾಗಿ ಬೆರೆತಾಗ ಮಾತ್ರ ಗುಣಮಟ್ಟದ ಶಿಕ್ಷಣ ನೀಡಲು ಸಾಧ್ಯ: ಡಾ. ಕೆ. ಶಿವಲಿಂಗಪ್ಪ ಹಂದ್ಯಾಳ್

ಗಣಿನಾಡ ವಾಣಿ

ಬಳ್ಳಾರಿ: ನಗರದ ಸೋನಿಯಾ ಗಾಂಧಿ ಶಿಕ್ಷಣ ಮಹಾವಿದ್ಯಾಲಯದಲ್ಲಿ ಮಕ್ಕಳ ದಿನಾಚರಣೆಯನ್ನು ಅತ್ಯಂತ ವಿಜೃಂಭಣೆ, ಸಂಭ್ರಮ ಹಾಗೂ ಅರ್ಥಪೂರ್ಣವಾಗಿ ಆಚರಿಸಲಾಯಿತು.

ಕಾರ್ಯಕ್ರಮವನ್ನು ಗಿಡಕ್ಕೆ ನೀರು ಎರೆಯುವ ಮೂಲಕ ಉದ್ಘಾಟಿಸಿ ಮಾತನಾಡಿದ ಮಹಾವಿದ್ಯಾಲಯದ ಪ್ರಾಂಶುಪಾಲರಾದ *ಡಾ. ಅಶ್ವ ರಾಮು* ಅವರು, ಮಕ್ಕಳ ದಿನಾಚರಣೆಯು ಕೇವಲ ಆಚರಣೆಗೆ ಸೀಮಿತವಾಗದೆ ಮಕ್ಕಳಲ್ಲಿರುವ ಸುಪ್ತ ಪ್ರತಿಭೆ, ಸೃಜನಶೀಲತೆ, ಕಲ್ಪನಾಶಕ್ತಿ ಹಾಗೂ ಆತ್ಮವಿಶ್ವಾಸವನ್ನು ಗುರುತಿಸಿ ಪ್ರೋತ್ಸಾಹಿಸುವ ಮಹತ್ವದ ವೇದಿಕೆಯಾಗಬೇಕು ಎಂದು ಹೇಳಿದರು.

ಗಿಡಕ್ಕೆ ನೀರು ಎರೆಯುವುದು ಪರಿಸರ ಸಂರಕ್ಷಣೆ ಮತ್ತು ಜೀವಪ್ರೀತಿಯ ಸಂಕೇತವಾಗಿದೆ. ಅದೇ ರೀತಿ ಮಕ್ಕಳಲ್ಲಿರುವ ಪ್ರತಿಭೆ ಅರಳಲು ಪ್ರೀತಿ, ವಿಶ್ವಾಸ, ಪ್ರೋತ್ಸಾಹ ಮತ್ತು ಸೂಕ್ತ ಮಾರ್ಗದರ್ಶನದ ಅಗತ್ಯವಿದೆ. ಮಕ್ಕಳ ಭವಿಷ್ಯವನ್ನು ಸುಂದರವಾಗಿ ರೂಪಿಸುವ ಜವಾಬ್ದಾರಿ ಶಿಕ್ಷಕರು ಮತ್ತು ಪೋಷಕರ ಮೇಲಿದೆ. ಶಿಕ್ಷಕ ವೃತ್ತಿ ಎಂದರೆ ಕೇವಲ ಪಠ್ಯಪುಸ್ತಕದ ಜ್ಞಾನವನ್ನು ಬೋಧಿಸುವುದಲ್ಲ; ಪ್ರತಿಯೊಬ್ಬ ಮಗುವಿನ ಆಸಕ್ತಿ, ಅಭಿರುಚಿ, ಸಾಮರ್ಥ್ಯ ಮತ್ತು ವೈಯಕ್ತಿಕ ಭಿನ್ನತೆಗಳನ್ನು



ಅರ್ಥಮಾಡಿಕೊಂಡು ಅವರ ಸರ್ವತೋಮುಖ ಬೆಳವಣಿಗೆಗೆ ಮಾರ್ಗದರ್ಶನ ನೀಡುವುದಾಗಿದೆ ಎಂದು ತಿಳಿಸಿದರು.

ಇಂದಿನ ಬಿ.ಇಡಿ ಪ್ರಶಿಕ್ಷಣಾರ್ಥಿಗಳು ನಾಳಿನ ಭವಿಷ್ಯದ ಶಿಕ್ಷಕರಾಗಿದ್ದು, ಮಕ್ಕಳ ಮನೋವಿಜ್ಞಾನವನ್ನು ಅರಿತುಕೊಂಡು ಮಕ್ಕಳೊಂದಿಗೆ ಆತ್ಮೀಯವಾಗಿ ಬೆರೆಯುವ ಗುಣವನ್ನು ಬೆಳೆಸಿಕೊಳ್ಳಬೇಕು. ಶಿಕ್ಷಣದ ಜೊತೆಗೆ ಕ್ರೀಡೆ, ಸಾಹಿತ್ಯ, ಕಲೆ, ಸಂಸ್ಕೃತಿ ಹಾಗೂ ಪಠ್ಯೇತರ ಚಟುವಟಿಕೆಗಳಿಗೂ ಆದ್ಯತೆ ನೀಡುವ ಮೂಲಕ ಮಕ್ಕಳಲ್ಲಿ ಆತ್ಮವಿಶ್ವಾಸ ಮತ್ತು ನಾಯಕತ್ವ ಗುಣಗಳನ್ನು ಬೆಳೆಸಬೇಕು ಎಂದು ಕರೆ ನೀಡಿದರು.

ಕಾರ್ಯಕ್ರಮದ ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ನಾಡಿನ ಖ್ಯಾತ ಮಕ್ಕಳ ಸಾಹಿತಿಗಳಾದ *ಡಾ. ಕೆ. ಶಿವಲಿಂಗಪ್ಪ ಹಂದ್ಯಾಳ್* ಅವರು ಮಾತನಾಡಿ, ಮಕ್ಕಳಿಗೆ ಕೇವಲ ಪದವಿಗಳು ಮತ್ತು ಶೈಕ್ಷಣಿಕ ಅರ್ಹತೆಗಳು ಮುಖ್ಯವಾಗುವುದಿಲ್ಲ. ಶಿಕ್ಷಕರು ಮಕ್ಕಳೊಂದಿಗೆ ಮಗುವಾಗಿ ಬೆರೆತು, ಅವರ ಭಾವನೆಗಳನ್ನು ಅರ್ಥಮಾಡಿಕೊಂಡಾಗ ಮಾತ್ರ ಉತ್ತಮ ಹಾಗೂ ಗುಣಮಟ್ಟದ ಶಿಕ್ಷಣ ನೀಡಲು ಸಾಧ್ಯವಾಗುತ್ತದೆ ಎಂದು ಅಭಿಪ್ರಾಯಪಟ್ಟರು.

ಮಕ್ಕಳ ಮನಸ್ಸು ಅತ್ಯಂತ ಸೂಕ್ಷ್ಮವಾಗಿದ್ದು, ಅವರಲ್ಲಿ ಅಪಾರವಾದ ಕಲ್ಪನಾಶಕ್ತಿ ಮತ್ತು ಸೃಜನಶೀಲತೆ ಅಡಗಿರುತ್ತದೆ. ಶಿಕ್ಷಕರು ಮಕ್ಕಳ ಮೇಲೆ ತಮ್ಮ ವಿಚಾರಗಳನ್ನು ಬಲವಂತವಾಗಿ ಹೇರದೆ, ಅವರ ಆಲೋಚನೆಗಳಿಗೆ ಸ್ವಾತಂತ್ರ್ಯ ನೀಡಬೇಕು. ಮಕ್ಕಳ ಪ್ರಶ್ನೆಗಳಿಗೆ ತಾಳ್ಮೆಯಿಂದ ಉತ್ತರಿಸುವುದರ ಜೊತೆಗೆ ಅವರಲ್ಲಿ ಪ್ರಶ್ನಿಸುವ ಮನೋಭಾವ ಮತ್ತು ಹೊಸದನ್ನು ಕಲಿಯುವ ಆಸಕ್ತಿಯನ್ನು ಬೆಳೆಸಬೇಕು. ಪ್ರತಿಯೊಂದು ಮಗುವಿನಲ್ಲಿಯೂ ಒಂದೊಂದು ವಿಶಿಷ್ಟ ಪ್ರತಿಭೆ ಅಡಗಿರುತ್ತದೆ. ಆ ಪ್ರತಿಭೆಯನ್ನು ಗುರುತಿಸಿ, ಸೂಕ್ತ ವೇದಿಕೆ ಕಲ್ಪಿಸಿ, ಪ್ರೋತ್ಸಾಹಿಸುವುದೇ ನಿಜವಾದ ಶಿಕ್ಷಕನ ಕರ್ತವ್ಯವಾಗಿದೆ ಎಂದು ಹೇಳಿದರು.

ಇಂದಿನ ಶಿಕ್ಷಣ ವ್ಯವಸ್ಥೆಯಲ್ಲಿ ಪಠ್ಯಾಧಾರಿತ ಕಲಿಕೆಯ ಜೊತೆಗೆ ಪಠ್ಯೇತರ ಚಟುವಟಿಕೆಗಳಿಗೂ ಸಮಾನ ಮಹತ್ವ ನೀಡಬೇಕು. ಮಕ್ಕಳು ಕ್ರೀಡೆ, ಸಾಹಿತ್ಯ, ಭಾಷಣ, ಚಿತ್ರಕಲೆ, ಸಂಗೀತ ಹಾಗೂ ಸಾಂಸ್ಕೃತಿಕ ಚಟುವಟಿಕೆಗಳಲ್ಲಿ ಭಾಗವಹಿಸಿದಾಗ ಅವರಲ್ಲಿ ಸೃಜನಶೀಲತೆ, ಆತ್ಮವಿಶ್ವಾಸ, ನಾಯಕತ್ವ ಗುಣ, ಸಂವಹನ ಕೌಶಲ್ಯ ಮತ್ತು ಸಾಮಾಜಿಕ ಪ್ರಜ್ಞೆ ಬೆಳೆಯುತ್ತವೆ. ಅಂಕಗಳು ಮತ್ತು ಪದವಿಗಳ ಆಧಾರದ ಮೇಲೆ ಮಾತ್ರ ಮಕ್ಕಳ ಸಾಮರ್ಥ್ಯವನ್ನು ಅಳೆಯದೆ, ಅವರಲ್ಲಿರುವ ಮಾನವೀಯ ಮೌಲ್ಯಗಳು, ನೈತಿಕ ಪ್ರಜ್ಞೆ ಮತ್ತು ಸೃಜನಾತ್ಮಕ ಆಲೋಚನೆಗಳಿಗೂ ಆದ್ಯತೆ ನೀಡಬೇಕು ಎಂದು ತಮ್ಮ ಉಪನ್ಯಾಸದಲ್ಲಿ ಮನಮುಟ್ಟುವಂತೆ ತಿಳಿಸಿದರು.

ಈ ಸಂದರ್ಭದಲ್ಲಿ ಮುಖ್ಯ ಅತಿಥಿಗಳಾದ ಡಾ. ಕೆ. ಶಿವಲಿಂಗಪ್ಪ ಹಂದ್ಯಾಳ್ ಅವರನ್ನು ಮಹಾವಿದ್ಯಾಲಯದ ವತಿಯಿಂದ ಗೌರವಪೂರ್ವಕವಾಗಿ ಸನ್ಮಾನಿಸಲಾಯಿತು. ಮಕ್ಕಳ ದಿನಾಚರಣೆಯ ಅಂಗವಾಗಿ ಪ್ರಥಮ ಹಾಗೂ ದ್ವಿತೀಯ ವರ್ಷದ ಬಿ.ಇಡಿ ಪ್ರಶಿಕ್ಷಣಾರ್ಥಿಗಳಿಗೆ ಆಯೋಜಿಸಿದ್ದ ವಿವಿಧ ಕ್ರೀಡಾ ಹಾಗೂ ಸಾಂಸ್ಕೃತಿಕ ಸ್ಪರ್ಧೆಗಳಲ್ಲಿ ವಿಜೇತರಾದವರಿಗೆ ಬಹುಮಾನಗಳನ್ನು ವಿತರಿಸಲಾಯಿತು. ನಂತರ ಪ್ರಶಿಕ್ಷಣಾರ್ಥಿಗಳಿಂದ ವೈವಿಧ್ಯಮಯ ಸಾಂಸ್ಕೃತಿಕ ಕಾರ್ಯಕ್ರಮಗಳು ಜರುಗಿದವು.

ಕಾರ್ಯಕ್ರಮದಲ್ಲಿ ಗೌಸಿಯಾ ಎಜುಕೇಶನ್ ಮೈನಾರಿಟೀಸ್ ಸೊಸೈಟಿಯ ಅಧ್ಯಕ್ಷರಾದ *ಆಲ್ಮಸ್ ತಬಸ್ಸುಮ್, ಆಡಳಿತಾಧಿಕಾರಿಗಳಾದ **ಹಫೀಜಾ ಬೇಗಂ, ಕಾಲೇಜಿನ ಬೋಧಕ ಸಿಬ್ಬಂದಿಗಳಾದ **ಆಂಥೋನಿ ಐ., ನಾಗವೇಣಿ ಎನ್.ಎಂ., ಬೋಧಕೇತರ ಸಿಬ್ಬಂದಿಗಳಾದ **ಭೀಮಪ್ಪ* ಸೇರಿದಂತೆ ಪ್ರಥಮ ಹಾಗೂ ದ್ವಿತೀಯ ವರ್ಷದ ಪ್ರಶಿಕ್ಷಣಾರ್ಥಿಗಳು ಉಪಸ್ಥಿತರಿದ್ದರು.

ಕಾರ್ಯಕ್ರಮದ ಆರಂಭದಲ್ಲಿ ಸೈಯದ್ ಅಲಿ ಪ್ರಾರ್ಥನೆ ಸಲ್ಲಿಸಿದರು. ಶ್ರೀವಾಣಿ ಸಿ. ಸ್ವಾಗತಿಸಿದರು. ಅಬೀದ್ ಹುಸೇನ್ ಮುಖ್ಯ ಅತಿಥಿಗಳನ್ನು ಪರಿಚಯಿಸಿದರು. ಶಿವಗಂಗಾ ವಂದನಾರ್ಪಣೆ ಸಲ್ಲಿಸಿದರು. ಆಲಂ ಬಾಷಾ ಕಾರ್ಯಕ್ರಮವನ್ನು ಅಚ್ಚುಕಟ್ಟಾಗಿ ನಿರೂಪಿಸಿದರು.

ಮಕ್ಕಳ ಪ್ರತಿಭೆಗಳಿಗೆ ಪ್ರೋತ್ಸಾಹ ನೀಡುವ, ಸೃಜನಶೀಲತೆಗೆ ವೇದಿಕೆ ಕಲ್ಪಿಸುವ ಹಾಗೂ ಭವಿಷ್ಯದ ಆದರ್ಶ ಶಿಕ್ಷಕರನ್ನು ರೂಪಿಸುವ ಆಶಯದೊಂದಿಗೆ ಮಕ್ಕಳ ದಿನಾಚರಣೆ ಕಾರ್ಯಕ್ರಮವು ಯಶಸ್ವಿಯಾಗಿ ಸಂಪನ್ನಗೊಂಡಿತು.

ಬಳ್ಳಾರಿ ಎಪಿಎಂಸಿ ಅಭಿವೃದ್ಧಿಗೆ ಆದ್ಯತೆ: ವ್ಯಾಪಾರಿಗಳ ಬೇಡಿಕೆ ಈಡೇರಿಸುವುದಾಗಿ ಶಾಸಕ ನಾರಾ ಭರತ್ ರೆಡ್ಡಿ ಭರವಸೆ

ಗಣಿನಾಡ ವಾಣಿ

ಎಪಿಎಂಸಿಗೆ ಖುದ್ದು ಭೇಟಿ ನೀಡಿ ವ್ಯಾಪಾರಿಗಳ ಕುಂದುಕೊರತೆ ಆಲಿಸಿದ ಶಾಸಕ; ಅಭಿವೃದ್ಧಿ ಕಾಮಗಾರಿಗಳಿಗೆ ಕ್ರಮದ ಭರವಸೆ

ಬಳ್ಳಾರಿ: ಬಳ್ಳಾರಿ ನಗರದ ಎಪಿಎಂಸಿ ಮಾರುಕಟ್ಟೆಗೆ ನಗರ ಶಾಸಕ ನಾರಾ ಭರತ್ ರೆಡ್ಡಿ ಅವರು ಭೇಟಿ ನೀಡಿ, ಅಲ್ಲಿನ ವ್ಯಾಪಾರಿಗಳ ಸಮಸ್ಯೆಗಳು ಹಾಗೂ ವಿವಿಧ ಬೇಡಿಕೆಗಳನ್ನು ಆಲಿಸಿದರು.ಬಳ್ಳಾರಿ ನಗರದ ಜನತೆಗೆ ಪ್ರತಿನಿತ್ಯ ಆಹಾರ ಧಾನ್ಯಗಳು ಹಾಗೂ ತರಕಾರಿಗಳನ್ನು ಪೂರೈಸುವಲ್ಲಿ ಎಪಿಎಂಸಿ ವ್ಯಾಪಾರಿಗಳು ಪ್ರಮುಖ ಪಾತ್ರ ವಹಿಸುತ್ತಿದ್ದಾರೆ.

ಇಂತಹ ವ್ಯಾಪಾರಿಗಳ ಬೇಡಿಕೆಗಳನ್ನು ಈಡೇರಿಸುವುದು ಹಾಗೂ ಮಾರುಕಟ್ಟೆಯ ಅಭಿವೃದ್ಧಿಗೆ ಅಗತ್ಯ ಸಹಕಾರ ನೀಡುವುದು ತಮ್ಮ ಕರ್ತವ್ಯವಾಗಿದೆ ಎಂದು ಶಾಸಕ ನಾರಾ ಭರತ್ ರೆಡ್ಡಿ ತಿಳಿಸಿದರು.

ಈ ಸಂದರ್ಭದಲ್ಲಿ ಎಪಿಎಂಸಿಯಲ್ಲಿ ಕೈಗೊಳ್ಳಬೇಕಿರುವ ವಿವಿಧ



ಅಭಿವೃದ್ಧಿ ಕಾಮಗಾರಿಗಳು ಹಾಗೂ ಮೂಲಸೌಕರ್ಯಗಳ ಸುಧಾರಣೆ ಸೇರಿದಂತೆ ಹಲವು ಬೇಡಿಕೆಗಳ ಕುರಿತು ವ್ಯಾಪಾರಿಗಳು ಶಾಸಕರಿಗೆ ಮನವಿ ಸಲ್ಲಿಸಿದರು.

ವ್ಯಾಪಾರಿಗಳೊಂದಿಗೆ ಖುದ್ದಾಗಿ ಚರ್ಚೆ ನಡೆಸಿದ ಶಾಸಕರು, ಅವರ ಕುಂದುಕೊರತೆಗಳನ್ನು ಆಲಿಸಿ, ಬೇಡಿಕೆಗಳನ್ನು ಈಡೇರಿಸಲು ಅಗತ್ಯ ಕ್ರಮ ಕೈಗೊಳ್ಳುವುದಾಗಿ ಭರವಸೆ ನೀಡಿದರು. ಅಲ್ಲದೆ, ಎಪಿಎಂಸಿಯ ಅಭಿವೃದ್ಧಿಗೆ ಸಂಬಂಧಿಸಿದಂತೆ ಸಂಬಂಧಪಟ್ಟ ಅಧಿಕಾರಿಗಳೊಂದಿಗೆ ಚರ್ಚಿಸಿ ಮುಂದಿನ ಕ್ರಮಗಳನ್ನು ಕೈಗೊಳ್ಳುವುದಾಗಿ ತಿಳಿಸಿದರು.

ಶಾಸಕರು ನೇರವಾಗಿ ಮಾರುಕಟ್ಟೆಗೆ ಭೇಟಿ ನೀಡಿ ತಮ್ಮ ಸಮಸ್ಯೆಗಳನ್ನು ಆಲಿಸಿರುವುದಕ್ಕೆ ವ್ಯಾಪಾರಿಗಳು ಸಂತಸ ವ್ಯಕ್ತಪಡಿಸಿದರು. ಎಪಿಎಂಸಿಯ ಸಮಗ್ರ ಅಭಿವೃದ್ಧಿಯಿಂದ ವ್ಯಾಪಾರಿಗಳು, ರೈತರು ಹಾಗೂ ಸಾರ್ವಜನಿಕರಿಗೆ ಹೆಚ್ಚಿನ ಅನುಕೂಲವಾಗಲಿದೆ ಎಂಬ ನಿರೀಕ್ಷೆಯನ್ನು ವ್ಯಕ್ತಪಡಿಸಿದರು.

ಬೈಕ್ ಕಳ್ಳನ ಬೇಟೆ; ಒಂದಲ್ಲ, ಎರಡಲ್ಲ ಬರೋಬ್ಬರಿ 37 ಬೈಕ್‌ಗಳು ವಶಕ್ಕೆ!

ಗಣಿನಾಡ ವಾಣಿ

14.80 ಲಕ್ಷ ಮೌಲ್ಯದ ಕಳವು ಬೈಕ್‌ಗಳ ಜಪ್ತಿ; ಆರೋಪಿ ಬಂಧನ ಬಳ್ಳಾರಿ ಪೊಲೀಸರ ಭರ್ಜರಿ ಕಾರ್ಯಾಚರಣೆ

ಬಳ್ಳಾರಿ: ನಗರದ ವಿವಿಧ ಪೊಲೀಸ್ ಠಾಣೆಗಳ ವ್ಯಾಪ್ತಿಯಲ್ಲಿ ನಡೆದಿದ್ದ ಬೈಕ್ ಕಳ್ಳತನ ಪ್ರಕರಣಗಳನ್ನು ಭೇದಿಸುವಲ್ಲಿ ಬಳ್ಳಾರಿ ಪೊಲೀಸರು ಮಹತ್ವದ ಯಶಸ್ಸು ಸಾಧಿಸಿದ್ದಾರೆ.

ವಿವಿಧೆಡೆ ಕಳ್ಳತನ ಮಾಡಲಾಗಿದ್ದ ಸುಮಾರು 14.80 ಲಕ್ಷ ಮೌಲ್ಯದ 37 ಮೋಟಾರ್ ಸೈಕಲ್‌ಗಳನ್ನು ಜಪ್ತಿ ಮಾಡಿದ್ದು, ಪ್ರಕರಣಕ್ಕೆ ಸಂಬಂಧಿಸಿದಂತೆ ಓರ್ವ ಆರೋಪಿಯನ್ನು ಬಂಧಿಸಿ ನ್ಯಾಯಾಂಗ ಬಂಧನಕ್ಕೆ ಒಪ್ಪಿಸಲಾಗಿದೆ.

ಬಂಧಿತ ಆರೋಪಿಯನ್ನು ಬಳ್ಳಾರಿಯ ರೂಪನಗುಡಿ ರಸ್ತೆಯ ಹರಿಶ್ಚಂದ್ರ ನಗರದ ನಿವಾಸಿ ಕಾಳಿ ಪ್ರಸಾದ್ ಅಲಿಯಾಸ್ ಕಾಳಿ (40) ಎಂದು ಗುರುತಿಸಲಾಗಿದೆ. ಈತ ಹೋಟೆಲ್ ಕೆಲಸ ಮಾಡುತ್ತಿದ್ದ ಎನ್ನಲಾಗಿದೆ.

ಬಳ್ಳಾರಿ ನಗರದ ಗಾಂಧಿನಗರ, ಬ್ರೂಸ್‌ಪೇಟೆ ಪೊಲೀಸ್ ಠಾಣೆಗಳ ವ್ಯಾಪ್ತಿಯಲ್ಲದೆ ತೋರಣಗಲ್ಲು, ಮುನಿರಾಬಾದ್, ಕಂಪ್ಲಿ ಹಾಗೂ ಗುಂತಕಲ್ಲು ಪೊಲೀಸ್ ಠಾಣೆಗಳ ವ್ಯಾಪ್ತಿಗಳಲ್ಲಿಯೂ ಬೈಕ್ ಕಳ್ಳತನ ಪ್ರಕರಣಗಳು ದಾಖಲಾಗಿದ್ದವು. ಈ ಪ್ರಕರಣಗಳ ತನಿಖೆ ಕೈಗೊಂಡ ಬ್ರೂಸ್‌ಪೇಟೆ ಮತ್ತು ಗಾಂಧಿನಗರ ಪೊಲೀಸರು ಪ್ರತ್ಯೇಕವಾಗಿ



ಕಾರ್ಯಾಚರಣೆ ನಡೆಸಿ ಆರೋಪಿಯನ್ನು ಬಂಧಿಸಿದ್ದಾರೆ.

ತನಿಖೆಯ ವೇಳೆ ಆರೋಪಿ ವಿವಿಧ ಸ್ಥಳಗಳಲ್ಲಿ ಮೋಟಾರ್ ಸೈಕಲ್‌ಗಳನ್ನು ಕಳ್ಳತನ ಮಾಡಿರುವುದು ಬೆಳಕಿಗೆ ಬಂದಿದೆ. ಆತನಿಂದ ವಿವಿಧ ಕಂಪನಿಗಳ ಒಟ್ಟು 37 ಮೋಟಾರ್ ಸೈಕಲ್‌ಗಳನ್ನು ವಶಪಡಿಸಿಕೊಳ್ಳಲಾಗಿದ್ದು, ಇವುಗಳ ಅಂದಾಜು ಮೌಲ್ಯ 14,80,000 ಎಂದು ಪೊಲೀಸರು ತಿಳಿಸಿದ್ದಾರೆ.

ಪೊಲೀಸ್ ಅಧಿಕಾರಿಗಳ ಮಾರ್ಗದರ್ಶನದಲ್ಲಿ ಕಾರ್ಯಾಚರಣೆ

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ. ಸುಮನ್ ಡಿ. ಪೆನ್ನೇಕರ್ ಹಾಗೂ ಹೆಚ್ಚುವರಿ ಪೊಲೀಸ್ ಅಧೀಕ್ಷಕರ ಮಾರ್ಗದರ್ಶನದಲ್ಲಿ ಬಳ್ಳಾರಿ ನಗರ ಡಿವೈಎಸ್ಪಿ ಗೋವಿಂದರಾಜ್ ಅವರ ನೇತೃತ್ವದಲ್ಲಿ ಕಾರ್ಯಾಚರಣೆ ನಡೆದಿದೆ. ಬ್ರೂಸ್‌ಪೇಟೆ ಪೊಲೀಸ್ ಠಾಣೆಯ ಇನ್ಸ್‌ಪೆಕ್ಟರ್ ಮಹಾಂತೇಶ್ ಟಿ., ಪಿಎಸ್‌ಐ ಶಹನಾಜ್ ಹಾಗೂ ಗಾಂಧಿನಗರ ಪೊಲೀಸ್ ಠಾಣೆಯ ಇನ್ಸ್‌ಪೆಕ್ಟರ್ ರವಿಚಂದ್ರ ಡಿ.ಬಿ., ಪಿಎಸ್‌ಐ ಕೆ. ವಿರೂಪಾಕ್ಷಪ್ಪ ಸೇರಿದಂತೆ ಎರಡೂ ಠಾಣೆಗಳ ಸಿಬ್ಬಂದಿ ತಂಡ ಕಾರ್ಯಾಚರಣೆಯಲ್ಲಿ ಪಾಲ್ಗೊಂಡಿತ್ತು.

ಪೊಲೀಸ್ ಸಿಬ್ಬಂದಿಗಳಾದ ರಮೇಶ್, ಬಸವರಾಜ್, ಉಮೇಶ್ ರೆಡ್ಡಿ, ಶಿವರಾಜ್ ಕುಮಾರ್, ಪರಶುರಾಮ್, ಗರಡಿ ರಾಜಶೇಖರ್, ದೊಡ್ಡ ಬಸವನಗೌಡ, ಜಯರಾಮ್, ಸೋಮಪ್ಪ, ರಾಮದಾಸ್, ಮಹಾಲಿಂಗಪ್ಪ, ಜಯರಾಜ್, ಬಿ. ತಿಮ್ಮಪ್ಪ, ಕೋಸಿಗಿ ಕಾಳಿಂಗಪ್ಪ, ಮಂಜುನಾಥ್ ಹಾಗೂ ಮಂಜುನಾಥ್ ಕಾರ್ಯಾಚರಣೆಯಲ್ಲಿ ಪ್ರಮುಖ ಪಾತ್ರ ವಹಿಸಿದ್ದಾರೆ.

ಕಳ್ಳತನ ಪ್ರಕರಣಗಳನ್ನು ಭೇದಿಸಿ, ಲಕ್ಷಾಂತರ ರೂಪಾಯಿ ಮೌಲ್ಯದ 37 ಬೈಕ್‌ಗಳನ್ನು ಪತ್ತೆಹಚ್ಚಿ ವಶಪಡಿಸಿಕೊಂಡ ಪೊಲೀಸ್ ತಂಡದ ಕಾರ್ಯವನ್ನು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ. ಸುಮನ್ ಡಿ. ಪೆನ್ನೇಕರ್ ಶ್ಲಾಘಿಸಿದ್ದಾರೆ.ಬಾಕ್ಸ್

37 ಬೈಕ್‌ಗಳು ಜಪ್ತಿಯಾದ ಮೋಟಾರ್ ಸೈಕಲ್‌ಗಳ

14.80 ಲಕ್ಷ ವಶಪಡಿಸಿಕೊಂಡ ಬೈಕ್‌ಗಳ ಅಂದಾಜು ಮೌಲ್ಯ

ಬಂಧಿತ ಆರೋಪಿ: ಕಾಳಿ ಪ್ರಸಾದ್ ಅಲಿಯಾಸ್ ಕಾಳಿ (40)

ಬಸವಣ್ಣನವರ ಬಗ್ಗೆ ಅವಹೇಳನ ಆರೋಪ: 'ಬಸವಮಂಟಪ' ಕೃತಿ ಮುಟ್ಟುಗೋಲಿಗೆ ವೀರಶೈವ ಮಹಾಸಭಾ ಆಗ್ರಹ!

ಲೇಖಕ ರವಿ ಹಂಜಿ ವಿರುದ್ಧ ಕಾನೂನು ಕ್ರಮಕ್ಕೆ ಒತ್ತಾಯ; ತಪ್ಪಿದಲ್ಲಿ ಉಗ್ರ ಹೋರಾಟದ ಎಚ್ಚರಿಕೆ

ಗಣಿನಾಡ ವಾಣಿ

ಹೊಳಲ್ಕೆರೆ, ನ. 25: ಕರ್ನಾಟಕದ ಸಾಂಸ್ಕೃತಿಕ ನಾಯಕ, ವಿಶ್ವಗುರು ಬಸವಣ್ಣನವರು ಹಾಗೂ ವೀರಶೈವ ಲಿಂಗಾಯತ ಸಮುದಾಯದ ಕುರಿತು ಅವಹೇಳನಕಾರಿ ಅಂಶಗಳನ್ನು ಒಳಗೊಂಡಿದೆ ಎನ್ನಲಾದ ಲೇಖಕ ರವಿ ಹಂಜಿ ಅವರ 'ಬಸವಮಂಟಪ' ಕೃತಿಯನ್ನು ತಕ್ಷಣ ಮುಟ್ಟುಗೋಲು ಹಾಕಿಕೊಳ್ಳಬೇಕು ಎಂದು ಆಗ್ರಹಿಸಿ ಅಖಿಲ ಭಾರತ ವೀರಶೈವ ಮಹಾಸಭಾದ ಹೊಳಲ್ಕೆರೆ ತಾಲೂಕು ಘಟಕದ ಪದಾಧಿಕಾರಿಗಳು ಬುಧವಾರ ಪ್ರತಿಭಟನೆ ನಡೆಸಿ, ದಂಡಾಧಿಕಾರಿಗಳಿಗೆ ಮನವಿ ಸಲ್ಲಿಸಿದರು.

ಲೇಖಕ ರವಿ ಹಂಜಿ ರಚಿಸಿರುವ 'ಬಸವಮಂಟಪ' ಕೃತಿಯಲ್ಲಿ ಪ್ರಚೋದನಕಾರಿ ಹಾಗೂ ಸಮಾಜದ ಭಾವನೆಗಳಿಗೆ ಧಕ್ಕೆ ತರುವಂತಹ ಹೇಳಿಕೆಗಳಿವೆ ಎಂಬುದು ಪ್ರತಿಭಟನಾಕಾರರ ಪ್ರಮುಖ ಆರೋಪವಾಗಿತ್ತು. ಇಂತಹ ಬರಹಗಳು ವೀರಶೈವ ಲಿಂಗಾಯತ ಸಮುದಾಯದ ಸ್ವಾಭಿಮಾನಕ್ಕೆ ಧಕ್ಕೆ ತರುವುದರ ಜೊತೆಗೆ ಸಾಮಾಜಿಕ ಸಾಮರಸ್ಯಕ್ಕೂ ಅಡ್ಡಿಯಾಗುವ ಸಾಧ್ಯತೆಯಿದೆ ಎಂದು ಆಕ್ಷೇಪ ವ್ಯಕ್ತಪಡಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಮಹಾಸಭಾದ ತಾಲೂಕು ಅಧ್ಯಕ್ಷ ಪ್ರಭಾಕರ್ ಮಾಳಿಗೆ, 12ನೇ ಶತಮಾನದಲ್ಲಿಯೇ ಜಾತಿ ವ್ಯವಸ್ಥೆ, ಅಸಮಾನತೆ ಹಾಗೂ ಸಾಮಾಜಿಕ ಅನ್ಯಾಯದ ವಿರುದ್ಧ ಧ್ವನಿ ಎತ್ತಿದ ಬಸವಣ್ಣನವರು ಸಮ ಸಮಾಜದ ನಿರ್ಮಾಣಕ್ಕೆ ಶ್ರಮಿಸಿದ ಮಹಾನ್ ಸಾಮಾಜಿಕ ಪರಿವರ್ತನೆಯ ಹರಿಕಾರರು. ಅವರ ಜಾತ್ಯತೀತ ಚಿಂತನೆ, ಸಮಾನತೆಯ ಸಂದೇಶ ಮತ್ತು



ಮಾನವೀಯ ಮೌಲ್ಯಗಳು ಇಂದಿಗೂ ಸಮಾಜಕ್ಕೆ ದಾರಿದೀಪವಾಗಿವೆ. ಅಂತಹ ಮಹಾನ್ ವ್ಯಕ್ತಿತ್ವದ ಕುರಿತು ಅವಹೇಳನಕಾರಿ ಬರಹಗಳನ್ನು ರಚಿಸುವುದನ್ನು ಸಹಿಸಲು ಸಾಧ್ಯವಿಲ್ಲ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಸಂಬಂಧಪಟ್ಟ ಅಧಿಕಾರಿಗಳು ಕೂಡಲೇ 'ಬಸವಮಂಟಪ' ಕೃತಿಯ ಅಂಶಗಳನ್ನು ಪರಿಶೀಲಿಸಿ, ಕಾನೂನುಬದ್ಧವಾಗಿ ಮುಟ್ಟುಗೋಲು ಹಾಕಿಕೊಳ್ಳುವ ಕ್ರಮ ಕೈಗೊಳ್ಳಬೇಕು. ಲೇಖಕನ ವಿರುದ್ಧ ಸೂಕ್ತ ಕಾನೂನು ಕ್ರಮ ಜರುಗಿಸಬೇಕು. ಸಮಾಜದ ಭಾವನೆಗಳಿಗೆ ಧಕ್ಕೆ ಉಂಟುಮಾಡುವ ಕೃತ್ಯಗಳಿಗೆ ಕಡಿವಾಣ ಹಾಕಬೇಕು ಎಂದು ಒತ್ತಾಯಿಸಿದರು.

ಹೋರಾಟದ ಎಚ್ಚರಿಕೆ

ಸಮಾಜದ ಗೌರವ ಹಾಗೂ ಬಸವಣ್ಣನವರ ತತ್ವಾದರ್ಶಗಳ ರಕ್ಷಣೆಗಾಗಿ ಮಹಾಸಭಾ ಬದ್ಧವಾಗಿದೆ. ಮನವಿಗೆ ಸೂಕ್ತ ಸ್ಪಂದನೆ ದೊರೆಯದಿದ್ದರೆ ಮುಂದಿನ ದಿನಗಳಲ್ಲಿ ತಾಲೂಕು ಘಟಕದ ವತಿಯಿಂದ ತೀವ್ರ ಹೋರಾಟ ಹಮ್ಮಿಕೊಳ್ಳಲಾಗುವುದು ಎಂದು ಎಚ್ಚರಿಕೆ ನೀಡಿದರು.

ಪ್ರತಿಭಟನೆಯಲ್ಲಿ ಮಹಾಸಭಾದ ಪ್ರಧಾನ ಕಾರ್ಯದರ್ಶಿ ಮಲ್ಲಿಕಾರ್ಜುನ ಎನ್.ಪಿ., ಕೋಶಾಧ್ಯಕ್ಷ ಬಸವರಾಜ್ ಜಿ.ಎಚ್., ಪಿಎಲ್‌ಡಿ ಬ್ಯಾಂಕ್ ಅಧ್ಯಕ್ಷ ಎಂ.ಕೆ. ರುದ್ರಪ್ಪ, ತಾಲೂಕು ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ

'ಬಸವ ಮಂಟಪ' ಕೃತಿ ನಿಷೇಧಕ್ಕೆ ಆಗ್ರಹಿಸಿ ಮೌನ ಪ್ರತಿಭಟನೆ

ಗಣಿನಾಡ ವಾಣಿ

ಸಿರುಗುಪ್ಪ: ವಿಶ್ವಗುರು ಬಸವಣ್ಣನವರ ವ್ಯಕ್ತಿತ್ವಕ್ಕೆ ಧಕ್ಕೆ ತರುವ ರೀತಿಯಲ್ಲಿ 'ಬಸವ ಮಂಟಪ' ಕೃತಿ ರಚಿಸಲಾಗಿದೆ ಎಂದು ಆರೋಪಿಸಿ, ನಗರದ ಬಸವ ಬಳಗ ಟ್ರಸ್ಟ್ ಹಾಗೂ ಸಮಸ್ತ ಬಸವ ಅಭಿಮಾನಿಗಳ ಬಳಗದ ವತಿಯಿಂದ ಬುಧವಾರ ಮೌನ ಪ್ರತಿಭಟನೆ ನಡೆಸಿದರು.

ನಗರದ ಅಭಯಾಂಜನೇಯ ದೇವಸ್ಥಾನದಿಂದ ಆರಂಭವಾದ ಮೌನ ಮೆರವಣಿಗೆಯು ಪ್ರಮುಖ ಬೀದಿಗಳ ಮೂಲಕ ತಹಶೀಲ್ದಾರ್ ಕಚೇರಿಗೆ ತಲುಪಿತು. ಬಳಿಕ ಪ್ರತಿಭಟನಾಕಾರರು ಮುಖ್ಯಮಂತ್ರಿಗಳಿಗೆ ಉಪ ತಹಶೀಲ್ದಾರ್ ಸಿದ್ಧಾರ್ಥ್ ಕಾರಂಜಿ ಅವರ ಮೂಲಕ ಮನವಿ ಪತ್ರ ಸಲ್ಲಿಸಿದರು.

ಬಸವರಾಜಪ್ಪ ಶರಣರು ಮಾತನಾಡಿ,□ಸಮಾನತೆ, ಸ್ವಾತಂತ್ರ್ಯ, ಕಾಯಕ, ದಾಸೋಹ ಹಾಗೂ ಬಂಧುತ್ವದ ಸಂದೇಶ ಸಾರಿದ ಕರ್ನಾಟಕ ಸಾಂಸ್ಕೃತಿಕ ನಾಯಕ ಬಸವಣ್ಣನವರ ವಚನಗಳನ್ನು ರವಿ ಹಂಜಗಿ ಮಠ ಅವರು ತಮ್ಮ ಕೃತಿಯಲ್ಲಿ ತಪ್ಪಾಗಿ ಅರ್ಥೈಸಿ, ಇತಿಹಾಸವನ್ನು ತಿರುಚಲು ಯತ್ನಿಸಿದ್ದಾರೆ. ಇದರಿಂದ



ಬಸವಾಭಿಮಾನಿಗಳ ಭಾವನೆಗಳಿಗೆ ತೀವ್ರ ನೋವುಂಟಾಗಿದೆ' ಎಂದು ದೂರಿದರು.

'ಕೃತಿ ರಚನೆಯ ಹಿಂದೆ ದೊಡ್ಡ ಷಡ್ಯಂತ್ರ ಅಡಗಿದೆ. ಸರ್ಕಾರ ತಕ್ಷಣವೇ ಕೃತಿಕಾರರ ವಿರುದ್ಧ ಕಾನೂನು ಕ್ರಮ ಜರುಗಿಸಿ ಬಂಧಿಸಬೇಕು. ವಿವಾದಿತ 'ಬಸವ ಮಂಟಪ'ಕೃತಿಯನ್ನು ಶಾಶ್ವತವಾಗಿ ನಿಷೇಧಿಸಬೇಕು. ಕೃತಿಯ ಹಿಂದಿರುವ ಕಾಣದ ಕೈಗಳನ್ನು ಪತ್ತೆಹಚ್ಚಲು ಪ್ರಕರಣವನ್ನು ವಿಶೇಷ ತನಿಖಾ ದಳಕ್ಕೆ (ಎಟಿ) ವಹಿಸಬೇಕು' ಎಂದು ಮನವಿಯಲ್ಲಿ ಒತ್ತಾಯಿಸಿದರು.

ಗುರುಬಸವ ಪೀಠದ ಬಸವಭೂಷಣ ಸ್ವಾಮೀಜಿ, ಮುಖಂಡರಾದ ಎನ್. ಎಂ.ಶಿವಪ್ರಕಾಶ, ಮಲ್ಲಿಕಾರ್ಜುನ, ಬಿ.ಎಂ. ಸತೀಶ, ಮರಿರಾಜಗೌಡ, ದರಪ್ಪ ನಾಯಕ, ಎಂ.ಎಸ್. ಸಿದ್ದಪ್ಪ, ಆರ್.ಸಿ.ಪೊಂಪನಗೌಡ, ಸುಳವಾಯಿ ಮಲ್ಲಿಕಾರ್ಜುನ ಹಾಗೂ ಸಮಸ್ತ ಬಸವ ಅಭಿಮಾನಿಗಳ ಬಳಗದ ಪದಾಧಿಕಾರಿಗಳು ಪಾಲ್ಗೊಂಡಿದ್ದರು.

ಚಿತ್ರ

ಸಿರುಗುಪ್ಪ ನಗರದ ಬಸವ ಬಳಗ ಟ್ರಸ್ಟ್ ಹಾಗೂ ಸಮಸ್ತ ಬಸವ ಅಭಿಮಾನಿಗಳ ಬಳಗದ ವತಿಯಿಂದ ಮುಖ್ಯಮಂತ್ರಿಗಳಿಗೆ ಉಪ ತಹಶೀಲ್ದಾರ್ ಸಿದ್ಧಾರ್ಥ್ ಕಾರಂಜಿ ಅವರ ಮೂಲಕ ಮನವಿ ಪತ್ರ ಸಲ್ಲಿಸಿದರು.

ಬ್ಯಾಡ್ಮಿಂಟನ್ ಪಂದ್ಯಾವಳಿ, ಜೆನಸಿಸ್ ಶಾಲೆ ಮಕ್ಕಳು ರಾಷ್ಟ್ರಮಟ್ಟಕ್ಕೆ ಆಯ್ಕೆ

ಗಣಿನಾಡ ವಾಣಿ

ಬಳ್ಳಾರಿ: ನಗರದ ಪೂರ್ವ ವಲಯದ ಪ್ರತಿಷ್ಠಿತ ಜೆನಸಿಸ್ ಶಾಲೆಯ ಮಕ್ಕಳು ಶಟಲ್ ಬ್ಯಾಡ್ಮಿಂಟನ್ ಪಂದ್ಯಾವಳಿಯಲ್ಲಿ ರಾಷ್ಟ್ರಮಟ್ಟಕ್ಕೆ ಆಯ್ಕೆಯಾಗುವ ಮೂಲಕ ಶಾಲೆಯ ಹಾಗೂ ಜಿಲ್ಲೆಯ ಕೀರ್ತಿ ಹೆಚ್ಚಿಸಿದ್ದಾರೆ. ಬೀದರ್ ನಗರದಲ್ಲಿ ನಡೆದ 14 ವರ್ಷದೊಳಗಿನ ರಾಜ್ಯ ಮಟ್ಟದ ಶೆಟಲ್ ಬ್ಯಾಡ್ಮಿಂಟನ್ ಪಂದ್ಯಾವಳಿಯಲ್ಲಿ ಶಾಲೆಯ 6ನೇ ತರಗತಿಯ ಸಮೃದ್ಧಿ ಹಾಗೂ ಯಶೋನಿಧಿ ಇಬ್ಬರು ಮಕ್ಕಳು ಅತ್ಯುತ್ತಮ ಸಾಧನೆ ಮಾಡುವ ಮೂಲಕ ರಾಷ್ಟ್ರಮಟ್ಟದ ಪಂದ್ಯಾವಳಿಗೆ ಆಯ್ಕೆಯಾಗಿದ್ದಾರೆ. ಮಕ್ಕಳ ಸಾಧನೆಗೆ ಶಾಲೆಯ ಸಂಸ್ಥಾಪಕ ಅಧ್ಯಕ್ಷ



ಸಂತೋಷ್ ಮಾರ್ಟಿನ್, ಕೋ ಆರ್ಡಿನೆಟರ್ ವಿಜಯಾ ಮೇಡಂ, ಮುಖ್ಯಗುರು ನಜ್ಮಾ, ದೈಹಿಕ ಶಿಕ್ಷಕ ನಾಗೇಶ್ ಸೇರಿದಂತೆ ಶಾಲೆಯ ಶಿಕ್ಷಕರು, ಸಿಬ್ಬಂದಿಗಳು, ಮಕ್ಕಳ ಪಾಲಕರು ಅಭಿನಂದಿಸಿದ್ದಾರೆ. ರಾಷ್ಟ್ರಮಟ್ಟದಲ್ಲೂ ಮಕ್ಕಳು ಉತ್ತಮ ಪ್ರದರ್ಶನ ನೀಡಿ ಗೆಲುವು ಸಾಧಿಸಲಿ ಎಂದು ಹಾರೈಸಿದ್ದಾರೆ.

ತಮಿಳುನಾಡಿನಲ್ಲಿ ದೀಪ ಸಂಘರ್ಷ : ಜೋಸೆಫ್ ಸರ್ಕಾರದ ವಿರುದ್ಧ ನ್ಯಾಯಾಂಗ ನಿಂದನೆ ಆರೋಪ

ಗಣಿನಾಡ ವಾಣಿ

ಮಧುರೈ,ನ.25– ತಮಿಳುನಾಡಿನ ಮಧುರೈ ಜಿಲ್ಲೆಯ ತಿರುಪರಂಕುಂದ್ರಂ ಬೆಟ್ಟದ ಮೇಲಿರುವ ವಿವಾದಿತ ದೀಪಥೂನ್ ಸ್ತಂಭದಲ್ಲಿ ಕಾರ್ತಿಗೈ ದೀಪ ಬೆಳಗಿಸುವ ವಿಚಾರ ಇದೀಗ ಸುಪಿಂ ಕೋರ್ಟ್ ಮೆಟ್ಟಿಲೇರಿದ್ದು, ರಾಜ್ಯದಲ್ಲಿ ರಾಜಕೀಯ ಮತ್ತು ಧಾರ್ಮಿಕ ಸಂಘರ್ಷಕ್ಕೆ ಕಾರಣವಾಗಿದೆ.

ಸುಪ್ರಿಂ ಕೋರ್ಟ್ ಆದ–ೇಶದ ಹೊರತಾಗಿಯೂ ದೀಪಥ–ೂನ್‌ನಲ್ಲಿ ದೀಪ ಬೆಳಗಿಸಲು ಸಾಧ್ಯವಾಗಿಲ್ಲ ಎಂದು ತಮಿಳುನಾಡು ಸರ್ಕಾರ ನ್ಯಾಯಾಲಯಕ್ಕೆ ತಿಳಿಸಿದೆ. ಮತ್ತೊಂದೆಡೆ, ನ್ಯಾಯಾಲಯದ ಆದೇಶವನ್ನು ಉದ್ದೇಶಪೂರ್ವಕವಾಗಿ ಉಲ್ಲಂಘಿಸಲಾಗಿದೆ ಎಂದು ಅರ್ಜಿದಾರರು ಆರೋಪಿಸಿದ್ದಾರೆ.

ನಿನ್ನೆ ದೀಪಥೂನ್‌ನಲ್ಲಿ ಕಾರ್ತಿಗೈ ದೀಪ ಬೆಳಗಿಸಲು ಸುಪ್ರಿಂ ಕೋರ್ಟ್ ಅನುಮತಿ ನೀಡಿತ್ತು. ಆದರೆ, ನ್ಯಾಯಾಲಯದ ನಿರ್ದೇಶನದಂತೆ ದೀಪ ಬೆಳಗಿಸುವ ಕಾರ್ಯ ನೆರವೇ–ರಿಲ್ಲ. ಈ ಹಿನ್ನೆಲೆಯಲ್ಲಿ ಬುಧವಾರ ಸುಪ್ರಿಂ ಕೋರ್ಟ್‌ಗೆ ಅನುಸರಣಾ ವರದಿ ಸಲ್ಲಿಸಿರುವ ಮಧುರೈ ಜಿಲ್ಲಾಧಿಕಾರಿ ಕೃಷ್ಣ, ದೀಪ ಬೆಳಗಿಸಲು ಎಲ್ಲ ರೀತಿಯ ಪ್ರಯತ್ನಗಳನ್ನು ಮಾಡಿದ್ದರೂ ದೇವಾಲಯದ ಆಡಳಿತ ಮಂಡಳಿ ಅನುಮತಿ ನೀಡದ ಕಾರಣ ಕಾರ್ಯ ಸಾಧ್ಯವಾಗಲಿಲ್ಲ ಎಂದು ತಿಳಿಸಿದ್ದಾರೆ.

ದೀಪಥೂನ್‌ನಲ್ಲಿ ದೀಪ ಬೆಳಗಿಸುವುದರಿಂದ ಸ್ಥಾಪಿತ ಧಾರ್ಮಿಕ ಪದ್ಧತಿಗಳು ಮತ್ತು ಆಚ–



ರಣೆಗಳಿಗೆ ಧಕ್ಕೆಯಾಗುತ್ತದೆ ಎಂಬ ಕಾರಣ ನೀಡಿ ದೇವಾಲಯ ಆಡಳಿತ ಮಂಡಳಿ ಅನುಮತಿ ನಿರಾಕರಿಸಿದೆ ಎಂದು ಜಿಲ್ಲಾಧಿಕಾರಿ ಅಫಿಡವಿಟ್‌ನಲ್ಲಿ ವಿವರಿಸಿದ್ದಾರೆ. ಹೀಗಾಗಿ ಮಂಗಳವಾರ ವಿವಾದಿತ ದೀಪಥೂನ್ ಸ್ತಂಭದಲ್ಲಿ ದೀಪ ಬೆಳಗಿಸುವ ಬದಲು ಉಚ್ಚಿಪಿಳ್ಳಯಾರ್ ದೇವಸ್ಥಾನದ ಸಮೀಪವಿರುವ ಸಾಂಪ್ರದಾಯಿಕ ದೀಪ ಮಂಟಪದಲ್ಲಿ ಮಾತ್ರ ದೀಪ ಬೆಳಗಿಸಲಾಗಿದೆ.

ನ್ಯಾಯಾಂಗ ನಿಂದನೆ ಆರೋಪ

ಸುಪ್ರಿಂ ಕೋರ್ಟ್ ಆದ–ೇಶವನ್ನು ಪಾಲಿಸುವುದಾಗಿ ಭರವಸೆ ನೀಡಿದ್ದ ತಮಿಳುನಾಡು ಸರ್ಕಾರ ಇದೀಗ ಅದನ್ನು ಜಾರಿಗೊಳಿಸುವಲ್ಲಿ ವಿಫಲವಾಗಿದೆ ಎಂದು ಮದ್ರಾಸ್ ಹೈಕೋರ್ಟ್‌ನ ಅರ್ಜಿದಾರರಲ್ಲಿ ಒಬ್ಬರಾದ ರಾಮ ರವಿಕುಮಾರ್ ಆರೋಪಿಸಿದ್ದಾರೆ.

ದೀಪಥೂನ್‌ನಲ್ಲಿ ದೀಪ ಬೆಳಗಿಸುವುದನ್ನು ತಡೆಯಲು ದೇವಾಲಯದ ಟ್ರಸ್ಟಿಗಳ ಮಂಡಳಿಯನ್ನು ಬಳಸಿಕೊಳ್ಳಲಾಗಿದೆ ಎಂಬುದು ಅರ್ಜಿದಾರರ ವಾದವಾಗಿದೆ. ಸರ್ಕಾರ ನ್ಯಾಯಾಲಯಕ್ಕೆ ನೀಡಿದ್ದ ಭರವಸೆಯನ್ನು ಉಲ್ಲಂಘಿ–ಸಿದ್ದು, ಸಂಬಂಧಪಟ್ಟ ಅಧಿಕಾ–ರಿಗಳ ವಿರುದ್ಧ ನ್ಯಾಯಾಂಗ ನಿಂದನೆ ಕ್ರಮ ಕೈಗೊಳ್ಳಬೇಕು ಎಂದು ಅವರು ಒತ್ತಾಯಿಸಿದ್ದಾರೆ.

ಆದರೆ, ಸುಪ್ರಿಂ ಕೋರ್ಟ್ ತಕ್ಷಣವೇ ನ್ಯಾಯಾಂಗ ನಿಂದನೆ ವಿಚಾರಣೆ ಆರಂಭಿಸಲು ನಿರಾಕರಿಸಿದೆ. ಈ ಸಂಬಂಧ ಅರ್ಜಿದಾರರು ಪ್ರತ್ಯೇಕವಾಗಿ ಔಪಚಾರಿಕ ಅರ್ಜಿ ಸಲ್ಲಿಸುವಂತೆ ಸೂಚಿಸಿದ್ದು, ಅರ್ಜಿ ಸಲ್ಲಿಕೆಯಾದ ಬಳಿಕ ಅಗತ್ಯವಿದ್ದರೆ ಸೂಕ್ತ ಆದ–ೇಶ ನೀಡುವುದಾಗಿ ತಿಳಿಸಿದೆ. ಹಿರಿಯ ವಕೀಲ ಗುರು ಕೃಷ್ಣಕುಮಾರ್ ಅವರು ಈ ಸಂಬಂಧ ಶೀಘ್ರದಲ್ಲೇ ಅರ್ಜಿ ಸಲ್ಲಿಸುವುದಾಗಿ ನ್ಯಾಯಪೀಠಕ್ಕೆ ತಿಳಿಸಿದ್ದಾರೆ.

ಬೆಂಗಳೂರು ಘನತ್ಯಾಜ್ಯ ನಿರ್ವಹಣೆ ನಿಯಮಿತದಲ್ಲಿ ಕೋಟಿ ಕೋಟಿ ಅವ್ಯವಹಾರ

ಗಣಿನಾಡ ವಾಣಿ

ಬೆಂಗಳೂರು, ನ.25– ಬೆಂಗಳೂರು ಘನತ್ಯಾಜ್ಯ ನಿರ್ವಹಣೆ ನಿಯಮಿತದ ಟೆಂಡರ್ ಪ್ರಕ್ರಿಯೆಯಲ್ಲಿ 660 ಕೋಟಿ ಮೊತ್ತದ ಅಕ್ರಮ ನಡೆದಿದೆ ಎಂದು ಆರೋಪಿಸಿರುವ ಬಿಜೆಪಿ ಮುಖಂಡ ಎನ್.ಆರ್. ರಮೇಶ್ ಅವರು ಸಂಸ್ಥೆಯ ಸಿಇಒ ಕರೀಗೌಡ ಸೇ–ರಿದಂತೆ ಮೂವರು ಅಧಿಕಾರಿಗಳ ವಿರುದ್ಧ ಜಾರಿ ನಿರ್ದೇಶನಾಲಯ ಮತ್ತು ಲೋಕಾಯುಕ್ತಕ್ಕೆ ದೂರು ಸಲ್ಲಿಸಿದ್ದಾರೆ.ನಕ್ಷೆಗಳನ್ನು ನೋಡಿ

ಬಿಎಸ್‌ಡಬ್ಲ್ಯುಎಂಎಲ್‌ನ ಸಿಇಒ ಕರೀಗೌಡ, ಸಿಜಿಎಂ ಎಸ್.ವಿ. ರಾಜೇಶ್ ಹಾಗೂ ಡಿಜಿಎಂ–1 ಚಂದ್ರಶೇಖರ್ ವಿರುದ್ಧ ಭ್ರಷ್ಟಾಚಾರ, ವಂಚನೆ, ಅಧಿಕಾರ ದುರುಪಯೋಗ ಮತ್ತು ಅಕ್ರಮ ಹಣ ವರ್ಗಾವಣೆ ಆರೋಪಗಳನ್ನು ಮಾಡಿರುವ ಅವರು, ಹಗರಣಕ್ಕೆ ಸಂಬಂಧಿಸಿದ ದಾಖಲೆಗಳನ್ನು ಪತ್ರಿಕಾಗೋಷ್ಠಿಯಲ್ಲಿ ಬಿಡುಗಡೆ ಮಾಡಿದರು.

ಗ್ರೇಟರ್ ಬೆಂಗಳೂರು ಪ್ರಾಧಿಕಾರದ (ಜಿಬಿಎ) ವ್ಯಾಪ್ತಿಯ ಐದು ನಗರ ಪಾಲಿಕೆಗಳ ಪ್ರದೇಶಗಳಲ್ಲಿ ಘನತ್ಯಾಜ್ಯ ನಿರ್ವಹಣೆ ಕಾರ್ಯಗಳಿಗಾಗಿ ರೂಪಿಸಲಾಗಿದ್ದ 33 ಪ್ಯಾಕೇಜ್‌ಗಳ ಟೆಂಡರ್ ಪ್ರಕ್ರಿಯೆಯಲ್ಲಿ ವ್ಯಾಪಕ ಅಕ್ರಮಗಳು ನಡೆದಿವೆ ಎಂಬುದು ರಮೇಶ್ ಅವರ ಪ್ರಮುಖ ಆರೋಪವಾಗಿದೆ.ನಕ್ಷೆಗಳನ್ನು ನೋಡಿ

659.36 ಕೋಟಿ ಹೆಚ್ಚುವರಿ ಹೊರೆ: ಘನತ್ಯಾಜ್ಯ ನಿರ್ವಹಣೆ ಕಾಮಗಾ–ರಿಗಳಿಗೆ ಸಂಬಂಧಿಸಿದಂತೆ ಆರಂಭದಲ್ಲಿ 33 ಪ್ಯಾಕೇಜ್‌ಗಳ



ಟೆಂಡರ್ ಆಹ್ವಾನಿಸಲಾಗಿತ್ತು. ಬಳಿಕ 22 ಪ್ರತ್ಯೇಕ ಟೆಂಡರ್ ಪ್ರಕಟಣೆಗಳನ್ನು ಹೊರಡಿಸಲಾಗಿದೆ. ಟೆಂಡರ್‌ನಲ್ಲಿ ಭಾಗವಹಿಸಿದ ಬಿಡ್‌ದಾರರು ಏಳು ವರ್ಷಗಳ ಅವಧಿಗೆ ಒಟ್ಟು 3,844.19 ಕೋಟಿ ಮೊತ್ತವನ್ನು ನಮೂದಿಸಿದ್ದರು. ಆದರೆ, ನಂತರದ ಪ್ರಕ್ರಿಯೆಯಲ್ಲಿ ಕಾನೂನುಬಾಹಿರವಾಗಿ ದರಗಳನ್ನು ಹೆಚ್ಚಿಸಿದ್ದರಿಂದ ಒಟ್ಟು ಮೊತ್ತ 4,504.32 ಕೋಟಿಗೆ ಏರಿಕೆಯಾಗಿದೆ ಎಂದು ರಮೇಶ್ ಆರೋಪಿಸಿದ್ದಾರೆ. ಈ ಮೂಲಕ 22 ಪ್ಯಾಕೇಜ್‌ಗಳ ಗುತ್ತಿಗೆದಾರರಿಗೆ ಹೆಚ್ಚುವರಿಯಾಗಿ 659.36 ಕೋಟಿ ಪಾವತಿಸಬೇಕಾದ ಪರಿಸ್ಥಿತಿ ನಿರ್ಮಾಣವಾಗಿದೆ. ಇದ–ರಿಂದ ಸಾರ್ವಜನಿಕ ಹಣಕ್ಕೆ ಭಾರೀ ನಷ್ಟವಾಗಲಿದೆ ಎಂದು ಅವರು ದೂ–ರಿದ್ದಾರೆ.

14ರಷ್ಟು ಟೆಂಡರ್ ಪ್ರೀಮಿಯಂಗೆ ಆಕ್ಷೇಪ:

ಕ್ಯಾಬಿನೆಟ್ ಸಮಿತಿಯ ಟಿಪ್ಪಣಿಯಲ್ಲಿ ಶೇ.4.86ರಷ್ಟು ದರವನ್ನು ಉಲ್ಲೇಖಿಸಲಾಗಿದ್ದರೂ, ಕೆಪಿಪಿಪಿ ಪೋರ್ಟಲ್‌ನಲ್ಲಿ ಬಿಡ್ ಸಲ್ಲಿಸಿದ ಗುತ್ತಿಗೆದಾರರಿಗೆ ಕಾನೂನುಬಾಹಿರವಾಗಿ ಶೇ.14ರಷ್ಟು ಹೆಚ್ಚುವರಿ ಮೊತ್ತಕ್ಕೆ ಅನುಮೋದನೆ ನೀಡಲಾಗಿದೆ ಎಂಬುದು ಮತ್ತೊಂದು ಆರೋಪ ಮಾಡಿದ್ದಾರೆ.

ಡೀಫಾಲ್ಟರ್ ಗುತ್ತಿಗೆದಾರರಿಗೆ ಟೆಂಡರ್:

ನೌಕರರ ಭವಿಷ್ಯ ನಿಧಿ (ಇಪಿಎಫ್) ಇಲಾಖೆಯು 2025ರ ಸೆಪ್ಟೆಂಬರ್ 15ರಂದು ಪ್ರಕಟಿಸಿದ್ದ ಡೀಫಾಲ್ಟರ್ ಗುತ್ತಿಗೆದಾರರ ಪಟ್ಟಿಯಲ್ಲಿರುವ ಸಂಸ್ಥೆಗಳಿಗೂ ಬಿಎಸ್‌ಡಬ್ಲ್ಯುಎಂ–ಎಲ್ ಟೆಂಡರ್ ನೀಡಿದೆ ಎಂದು ರಮೇಶ್ ಆರೋಪಿಸಿದ್ದಾರೆ. ಇಂತಹ ಗುತ್ತಿಗೆದಾರರಿಗೆ ಟೆಂಡರ್ ನೀಡಬಾರದು ಎಂಬ ಸೂಚನೆ ಇದ್ದರೂ ಅದನ್ನು ಪಾಲಿಸಿಲ್ಲ ಎಂದು ದೂರಿದ್ದಾರೆ.ಈ ವಿಚಾರಕ್ಕೆ ಸಂಬಂಧಿಸಿದಂತೆ ಐದು ನಗರ ಪಾಲಿಕೆಗಳ ಆಯುಕ್ತರುಗಳು ಮೇಲ್ಮನವಿ ಸಲ್ಲಿಸಿದ್ದು, ಇದ–ರಿಂದ ಪಾಲಿಕೆಗಳಿಗೆ ಸುಮಾರು 90 ಕೋಟಿ ನಷ್ಟ ಉಂಟಾಗಿದೆ ಎಂಬ ಆರೋಪವನ್ನೂ ಅವರು ಮಾಡಿದ್ದಾರೆ.

'ಆಶಾ' ಒತ್ತಡದಲ್ಲಿರುವ ಸರ್ಕಾರಕ್ಕೆ ಮತ್ತೊಂದು ತಲೆಬಿಸಿ : ಅನಿರ್ದಿಷ್ಟಾವಧಿ ಪ್ರತಿಭಟನೆಗಿಳಿದ ಬಿಸಿಯೂಟ ಸಿಬ್ಬಂದಿ

ಗಣಿನಾಡ ವಾಣಿ

ಬೆಂಗಳೂರು, ನ.25– ಆಶಾ ಕಾರ್ಯಕರ್ತೆಯರು ಸತತ 9 ದಿನಗಳಿಂದಲೂ ಅಹೋರಾತ್ರಿ ಧರಣಿ ನಡೆಸಿ ಸರ್ಕಾರವನ್ನು ಇಕ್ಕಟ್ಟಿಗೆ ಸಿಲುಕಿಸಿರುವ ನಡುವೆಯೇ, ಬಿಸಿಯೂಟ ಕಾರ್ಯಕರ್ತರು ಕೂಡ ಅನಿರ್ಧಿಷ್ಟಾವಧಿ ಪ್ರತಿಭಟನೆ ಆರಂಭಿಸಿದ್ದಾರೆ. ನಗರದಲ್ಲಿ ಆರಂಭವಾಗಿರುವ ಪ್ರತಿಭಟನೆಯಲ್ಲಿ ಸಾವಿರಾರು ಜನ ಬಿಸಿಯೂಟ ಕಾರ್ಯಕರ್ತೆಯರು ಭಾಗವಹಿಸಿದ್ದಾರೆ. ಒಟ್ಟು 1.20 ಲಕ್ಷ ದಾಸೋಹ ಸಿಬ್ಬಂದಿಯಲ್ಲಿ, ಕ್ಲಸ್ಟರ್ ಕಿಚನ್ ವ್ಯವಸ್ಥೆ ಜಾರಿಗೆ ಬಂದರೆ 60 ಸಾವಿರ ಜನ ಕೆಲಸ ಕಳೆದುಕೊಳ್ಳುತ್ತಾರೆ ಎಂಬ ಆತಂಕ ವ್ಯಕ್ತಪಡಿಸಿದ್ದಾರೆ.ನಕ್ಷೆಗಳನ್ನು ನೋಡಿ

25 ವರ್ಷಗಳಿಂದಲೂ ನಾವು ಕೆಲಸ ಮಾಡುತ್ತಿದ್ದೇವೆ. ಈಗ ಶಾಲಾ ಮುಖೋಪಧ್ಯಾಯ ಸಂಘದಿಂದ ಬಿಸಿಯೂಟ ವ್ಯವಸ್ಥೆಯನ್ನು ನಿರ್ವಹಿಸಲು ಸಾಧ್ಯವಿಲ್ಲ ಎಂಬ ಪತ್ರವನ್ನು ಸರ್ಕಾರಕ್ಕೆ ನೀಡಲಾಗಿದೆ. ಅದಕ್ಕಾಗಿ ಕ್ಲಸ್ಟರ್ ಕಿಚನ್ ವ್ಯವಸ್ಥೆ ಜಾ–ರಿಗೊಳಿಸುವ ಪ್ರಯತ್ನಗಳಾಗುತ್ತಿವೆ. 25 ವರ್ಷಗಳಿಂದ ನಿರ್ವಹಣೆ ಮಾಡುತ್ತಿದ್ದವರಿಗೆ ಈಗ ಅಸಾಧ್ಯವಾಗಿರುವುದು ಏಕೆ? ಎಂದು ಗೊತ್ತಿಲ್ಲ. ಏನೇ ಆದರೂ ನಮಗೆ ಅವಕಾಶ ಕೊಟ್ಟರೆ ನಾವೇ ನಿರ್ವಹಣೆ ಮಾಡುತೆವೆ ಎಂದು ಬಿಸಿಯೂಟ ನೌಕರರ ಸಂಘದ ಉಪಾಧ್ಯಕ್ಷೆ ಹನುಮಕ್ಕ ಹೇಳಿದ್ದಾರೆ.ಸರ್ಕಾರಿ ಶಾಲೆಗಳ ಮಧ್ಯಾಹ್ನದ ಬಿಸಿಯೂಟ ಯೋಜನೆಯಲ್ಲಿ ಪ್ರಸ್ತಾಪಿಸಲಾಗಿರುವ ಕ್ಲಸ್ಟರ್ ಅಡುಗೆಮನೆ ವ್ಯವಸ್ಥೆಯನ್ನು



ಕೈಬಿಡಬೇಕು ಹಾಗೂ ಬಿಸಿಯೂಟ ತಯಾರಿಸುವ ಸಂಪೂರ್ಣ ಜವಾಬ್ದಾರಿಯನ್ನು ಈಗಾಗಲೇ ಕಾರ್ಯನಿರ್ವಹಿಸುತ್ತಿರುವ ಅಡುಗೆ ಸಿಬ್ಬಂದಿಗೆ ವಹಿಸಬೇಕು ಎಂದು ಕರ್ನಾಟಕ ರಾಜ್ಯ ಅಕ್ಷರ ದಾಸೋಹ ನೌಕರರ ಸಂಘ (ಸಿಐಟಿಯು) ಆಗ್ರಹಿಸಿದೆ.

ಈ ಸಂಬಂಧ ಕರ್ನಾಟಕ ರಾಜ್ಯ ಅಕ್ಷರ ದಾಸೋಹ ನೌಕರರ ಸಂಘದ ಗೌರವಾಧ್ಯಕ್ಷೆ ಎಸ್. ವರಲಕ್ಷ್ಮಿ, ಅಧ್ಯಕ್ಷೆ ಲಕಿದೇವಿ ಹಾಗೂ ಪ್ರಧಾನ ಕಾರ್ಯದರ್ಶಿ ಮಾಲಿನಿ ಮೇಸ್ತ ಶಿಕ್ಷಣ ಇಲಾಖೆಗೆ ಮನವಿ ಸಲ್ಲಿಸಿದ್ದು, ಕ್ಲಸ್ಟರ್ ಕಿಚನ್ ವ್ಯವಸ್ಥೆ ಜಾ–ರಿಗೆ ತರುವುದರಿಂದ ಈಗಾಗಲೇ ಶಾಲೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಅಡುಗೆ ಸಿಬ್ಬಂದಿಯ ಉದ್ಯೋಗಕ್ಕೆ ಧಕ್ಕೆಯಾಗಲಿದೆ ಎಂದು ಆತಂಕ ವ್ಯಕ್ತಪಡಿಸಲಾಗಿದೆ.

ಈ ಯೋಜನೆಗಾಗಿ ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ಸುಮಾರು 1,200 ಕೋಟಿ ರೂ. ವೆಚ್ಚದಲ್ಲಿ ಶಾಲೆಗಳಲ್ಲಿ ಅಡುಗೆ ಕೋಣೆಗಳನ್ನು ನಿರ್ಮಿಸಿ, ಅಗತ್ಯ ಪಾತ್ರೆಗಳು, ಅನಿಲ ಸೇರಿದಂತೆ ಮೂಲಸೌಕರ್ಯಗಳನ್ನು ಒದಗಿಸಿವೆ. ಯೋಜನೆಯ ಮೇಲ್ವಿಚಾರಣೆಗಾಗಿ ಪ್ರತ್ಯೇಕ ನಿರ್ದೇಶನಾಲಯವನ್ನೂ ಸ್ಥಾಪಿಸಲಾಗಿದೆ. ಇಂತಹ ವ್ಯವಸ್ಥೆ ಇರುವಾಗ ಕ್ಲಸ್ಟರ್ ಅಡುಗೆಮನೆಗಳ ಅಗತ್ಯವೇನು ಎಂದು ಪ್ರಶ್ನಿಸಲಾಗಿದೆ.

ಬಿಸಿಯೂಟ ಯೋಜನೆಯಲ್ಲಿ ಯಾವುದೇ ರೀತಿಯ ಖಾಸಗಿ ಸಂಸ್ಥೆಗಳಿಗೆ ಅವಕಾಶ ನೀಡಬಾರದು. ಈಗಾಗಲೇ ಇಸ್ಕಾನ್ ಹಾಗೂ ಅದಮ್ಯ ಚೇತನ ಮಠಗಳಿಗೆ ವಹಿಸಿರುವ ಬಿಸಿಯೂಟ ವ್ಯವಸ್ಥೆಯನ್ನು ಹಿಂದಕ್ಕೆ ಪಡೆಯಬೇಕು. ಅಕ್ಷರ ದಾಸೋಹ ಯೋಜನೆಯ ಜಂಟಿ ಖಾತೆಯನ್ನು ಮುಖ್ಯ ಅಡುಗೆಯವರು ಹಾಗೂ ಶಾಲಾಭಿವೃದ್ಧಿ ಮತ್ತು ಮೇಲ್ವಿಚಾರಣಾ ಸಮಿತಿಯ ನಾಮನಿರ್ದೇಶಿತ ಮುಖ್ಯ ಶಿಕ್ಷಕರ ನಿರ್ವಹಣೆಗೆ ನೀಡಬೇಕು ಎಂದು ಒತ್ತಾಯಿಸಿದ್ದಾರೆ.

ಶಿಕ್ಷಕರಿಗೆ ಅಡುಗೆ ಜವಾಬ್ದಾರಿ ವಹಿಸುವುದನ್ನೂ ಸಂಘ ವಿರೋಧಿಸಿದೆ. ಶಿಕ್ಷಕರು ಶಾಲಾ ಪಠ್ಯಕ್ರಮ ಮತ್ತು ಬೋಧನಾ ಚಟುವಟಿಕೆಗಳತ್ತ ಗಮನಹರಿಸಬೇಕಾಗಿದ್ದು, ಅಡುಗೆ ನಿರ್ವಹಣೆಯ ಜವಾಬ್ದಾರಿಯನ್ನು ಅವರ ಮೇಲೆ ಹೊರಿಸುವುದು ಸೂಕ್ತವಲ್ಲ ಎಂದು ಹೇಳಿದೆ.

ಪೊಲೀಸರ ಭರ್ಜರಿ ಕಾರ್ಯಾಚರಣೆ 11.44 ಕೋಟಿ ಮೌಲ್ಯದ ಡ್ರಗ್ಸ್ ಜಪ್ತಿ

ಗಣಿನಾಡ ವಾಣಿ

ಬೆಂಗಳೂರು,ನ.25–ಮಾದಕ ವಸ್ತು ಜಾಲದ ವಿರುದ್ಧ ನಗರ ಪೊಲೀಸರು ಭರ್ಜರಿ ಕಾರ್ಯಾಚರಣೆ ಮುಂದುವರೆಸಿದ್ದು, 11.44 ಕೋಟಿ ಮೌಲ್ಯದ ಮಾದಕ ವಸ್ತು ವಶಪಡಿಸಿ ಕೊಂಡಿದ್ದಾರೆ.ವಿದ್ಯಾರ್ಥಿಗಳಿಗೆ ಹಾಗೂ ಸಾರ್ವಜನಿಕರಿಗೆ ಮಾದಕ ವಸ್ತು ಮಾ